ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 138 Friday **13-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 138 ಶುಕ್ರವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಸೊಪ್ಪಿಗೂ ಬಂತು ಬೆಲೆ ಏರಿಕೆಯ ಬಿಸಿ!

ಮಳೆ ಕೊರತೆ, ಬರಗಾಲದ ಪರಿಣಾಮ ಸೊಪ್ಪಿನ ಉತ್ಪಾದನೆ ಕುಂಠಿತ । ಬಿಸಿಯೂಟ, ವಿದ್ಯಾರ್ಥಿನಿಲಯಗಳ ಆಹಾರ ವೆಚ್ಚಕ್ಕೂ ಬರೆ

“ಮುಂಜಾನೆಯ ಮೆರಗು”

ಜಗಳೂರು ನ, 12– ಮಳೆ ಕೊರತೆ ಹಾಗೂ ಬರಗಾಲದ ಪರಿಣಾಮ ಸೊಪ್ಪಿನ ಉತ್ಪಾದನೆ ಗಣನೀಯವಾಗಿ ಕುಂಠಿತಗೊಂಡಿದ್ದು, ಪಟ್ಟಣದ ಮಾರುಕಟ್ಟೆಯಲ್ಲಿ ವಿವಿಧ ಸೊಪ್ಪುಗಳ ಬೆಲೆ ಏರುಮುಖವಾಗಿದೆ. ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ದರ ಗ್ರಾಹಕರ ಜೇಬಿಗೆ ಕತ್ತರಿ ಹಾಕುತ್ತಿದ್ದು, ನಿತ್ಯದ ಅಡುಗೆಯಲ್ಲಿ ಸೊಪ್ಪು ಬಳಸುವ ಸಾಮಾನ್ಯ ಕುಟುಂಬಗಳು ಬೆಲೆ ಏರಿಕೆಯ ಬಿಸಿಯನ್ನು ಅನುಭವಿಸುವಂತಾಗಿದೆ.

ಒಂದೆಡೆ ಹಾಲಿನ ದರ, ಬಸ್ ಪ್ರಯಾಣ ದರ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಳದಿಂದ ಜನಸಾಮಾನ್ಯರು ತತ್ತರಿಸುತ್ತಿದ್ದರೆ, ಮತ್ತೊಂದೆಡೆ ತರಕಾರಿ ಹಾಗೂ ಸೊಪ್ಪಿನ ಬೆಲೆ ಏರಿಕೆ ಕುಟುಂಬಗಳ ಮಾಸಿಕ ಖರ್ಚಿನ ಹೊರೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಮಾರುಕಟ್ಟೆಯಲ್ಲಿ ಕೊತ್ತಂಬರಿ, ಮೆಂತ್ಯೆ, ಪಾಲಕ್, ಪುದೀನ ಸೇರಿದಂತೆ ಬಹುತೇಕ ಎಲ್ಲ ಬಗೆಯ ಸೊಪ್ಪುಗಳ ಒಂದು ಕಟ್ಟಿಗೆ ಕನಿಷ್ಠ 10 ರೂಪಾಯಿ ದರ ನಿಗದಿಯಾಗಿದೆ. ಹಿಂದೆ ಕಡಿಮೆ ಬೆಲೆಗೆ ಸುಲಭವಾಗಿ ದೊರೆಯುತ್ತಿದ್ದ ಸೊಪ್ಪುಗಳ



ಬೆಲೆ ಏರಿಕೆಯಾಗಿರುವುದು ಗ್ರಾಹಕರಲ್ಲಿ ಅಸಮಾಧಾನ ಮೂಡಿಸಿದೆ. ಕಡಿಮೆ ಪ್ರಮಾಣದ ಸೊಪ್ಪು ಖರೀದಿಸಲೂ ಹೆಚ್ಚಿನ ಹಣ ವ್ಯಯಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಶಿಕ್ಷಕರಿಗೂ ತಲೆನೋವಾದ ಸೊಪ್ಪಿನ ಬೆಲೆ ಏರಿಕೆ

ಸೊಪ್ಪಿನ ಬೆಲೆ ಏರಿಕೆಯ ಬಿಸಿ ಸರ್ಕಾರಿ ಶಾಲೆಗಳ ಮಧ್ಯಾಹ್ನದ ಬಿಸಿಯೂಟದ ಮೇಲೂ ಪರಿಣಾಮ ಬೀರುವ ಆತಂಕ ಎದುರಾಗಿದೆ. ವಿದ್ಯಾರ್ಥಿಗಳಿಗೆ ಪೌಷ್ಟಿಕ ಆಹಾರ ಒದಗಿಸುವ ಉದ್ದೇಶದಿಂದ ತಯಾರಿಸುವ ಬಿಸಿಯೂಟದಲ್ಲಿ ಸೊಪ್ಪು ಪ್ರಮುಖ ಪಾತ್ರ ವಹಿಸುತ್ತದೆ. ಆದರೆ, ದಿನೇದಿನೇ ಸೊಪ್ಪಿನ ಬೆಲೆ ಹೆಚ್ಚುತ್ತಿರುವುದರಿಂದ ನಿಗದಿತ ಅನುದಾನದೊಳಗೆ ಗುಣಮಟ್ಟದ ಆಹಾರ ಸಿದ್ಧಪಡಿಸುವುದು ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿಗೆ ಸವಾಲಾಗಿ ಪರಿಣಮಿಸಿದೆ.

ವಿದ್ಯಾರ್ಥಿನಿಲಯಗಳಿಗೂ ತಟ್ಟಿದ ಬೆಲೆ ಏರಿಕೆ ಬಿಸಿ

ಸೊಪ್ಪಿನ ಬೆಲೆ ಏರಿಕೆಯ ಬಿಸಿ ಸರ್ಕಾರಿ ಹಾಗೂ ಖಾಸಗಿ ವಿದ್ಯಾರ್ಥಿನಿಲಯಗಳಿಗೂ ತಟ್ಟಿದೆ. ನೂರಾರು ವಿದ್ಯಾರ್ಥಿಗಳಿಗೆ ಪ್ರತಿದಿನ ಆಹಾರ ಸಿದ್ಧಪಡಿಸುವ ವಸತಿ ನಿಲಯಗಳಲ್ಲಿ ಸೊಪ್ಪು ಸೇರಿದಂತೆ ತರಕಾರಿಗಳ ಖರೀದಿಗೆ ಹೆಚ್ಚಿನ ಹಣ ವೆಚ್ಚ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಆಹಾರ ವೆಚ್ಚ ಹೆಚ್ಚುತ್ತಿರುವುದು ನಿಲಯಗಳ ನಿರ್ವಹಣೆಯ ಮೇಲೂ ಪರಿಣಾಮ ಬೀರುತ್ತಿದೆ.

ಸ್ಥಳೀಯ ಉತ್ಪಾದನೆ ಕುಂಠಿತ; ಹೊರ ಜಿಲ್ಲೆಗಳಿಂದ ಆಮದು

ತಾಲೂಕಿನ ಜಮ್ಮಾಪುರ, ಬೊಮ್ಮಕ್ಕನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸೊಪ್ಪುಗಳನ್ನು ಬೆಳೆಯಲಾಗುತ್ತಿತ್ತು. ಆದರೆ, ಈ ಬಾರಿ ಮಳೆ ಕೊರತೆ ಹಾಗೂ ನೀರಿನ ಅಭಾವದಿಂದ ಸೊಪ್ಪಿನ ಬೆಳೆ ನಿರೀಕ್ಷಿತ ಪ್ರಮಾಣದಲ್ಲಿ ಬಂದಿಲ್ಲ. ಪರಿಣಾಮವಾಗಿ ಸ್ಥಳೀಯ ಮಾರುಕಟ್ಟೆಗೆ ಪೂರೈಕೆ ಕಡಿಮೆಯಾಗಿದೆ. ಬೇಡಿಕೆಗೆ ಅನುಗುಣವಾಗಿ ಹೊರ ಜಿಲ್ಲೆಗಳಿಂದ ಸೊಪ್ಪುಗಳನ್ನು ಪಟ್ಟಣಕ್ಕೆ ತರಿಸಿಕೊಳ್ಳಲಾಗುತ್ತಿದೆ. ಸಾಗಣೆ ವೆಚ್ಚವೂ ಬೆಲೆ ಏರಿಕೆಗೆ ಒಂದು ಕಾರಣವಾಗಿದೆ.



ಇತ್ತೀಚಿನ ವರ್ಷಗಳಲ್ಲಿ ತಾಲೂಕಿನಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹೆಚ್ಚಾಗುತ್ತಿದ್ದು, ಸೊಪ್ಪು ಹಾಗೂ ಇತರೆ ತರಕಾರಿ ಬೆಳೆಗಳ ವಿಸ್ತೀರ್ಣ ಕಡಿಮೆಯಾಗುತ್ತಿದೆ. ಇದರೊಂದಿಗೆ ಮಳೆ ಕೊರತೆ ಮತ್ತು ನೀರಿನ ಅಭಾವವೂ ಸೇರಿ ಸ್ಥಳೀಯವಾಗಿ ಸೊಪ್ಪಿನ ಉತ್ಪಾದನೆ ಕುಸಿಯಲು ಕಾರಣವಾಗಿದೆ.

ತಾಲೂಕಿನಲ್ಲಿ ಇತ್ತೀಚಿನ ವರ್ಷಗಳಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹೆಚ್ಚಾಗುತ್ತಿದೆ. ಇದರಿಂದ ಸೊಪ್ಪು ಹಾಗೂ ಇತರೆ ತರಕಾರಿ ಬೆಳೆಗಳ ವಿಸ್ತೀರ್ಣ ಕಡಿಮೆಯಾಗುತ್ತಿದೆ. ಈ ಬಾರಿ ಮಳೆಯ ಕೊರತೆಯಿಂದ ಬೆಳೆಗಳು ಸರಿಯಾಗಿ ಬಂದಿಲ್ಲ. ಹೀಗಾಗಿ ಸ್ಥಳೀಯವಾಗಿ ಸೊಪ್ಪಿನ ಉತ್ಪಾದನೆ ಕಡಿಮೆಯಾಗಿದ್ದು, ಹೊರ ಜಿಲ್ಲೆಗಳಿಂದ ಸೊಪ್ಪು ತರಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಮಾರುಕಟ್ಟೆಯಲ್ಲಿ ಸೊಪ್ಪಿನ ಬೆಲೆ ಹೆಚ್ಚಾಗಿದೆ ಎಂದು ರೈತ ನಾಗರಾಜ್ ತಿಳಿಸಿದರು.

ಬಸ್ ನಿಲ್ದಾಣದ ಸಂಪರ್ಕ ರಸ್ತೆಯಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ

“ಮುಂಜಾನೆಯ ಮೆರಗು”

ಜಗಳೂರು ನ, 12– ಪಟ್ಟಣದ ಕೆಎಸ್ಆರ್‌ಟಿಸಿ ಬಸ್ ನಿಲ್ದಾಣಕ್ಕೆ ತೆರಳುವ ಸಂಪರ್ಕ ರಸ್ತೆಯ ಎರಡೂ ಬದಿಗಳಲ್ಲಿ ಅಂಗಡಿ ಮಾಲೀಕರು ಮಾಡಿಕೊಂಡಿದ್ದ ಒತ್ತುವರಿಯನ್ನು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಗುರುವಾರ ತೆರವುಗೊಳಿಸಿದರು.



ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಮುಂಭಾಗದಿಂದ ಕೆಎಸ್ಆರ್‌ಟಿಸಿ ಬಸ್ ನಿಲ್ದಾಣಕ್ಕೆ ತೆರಳುವ ರಸ್ತೆಯ ಎರಡೂ ಬದಿಗಳಲ್ಲಿರುವ ಕೆಲವು ಅಂಗಡಿಗಳ ಮಾಲೀಕರು ತಮ್ಮ ಅಂಗಡಿಗಳ ಮುಂಭಾಗದ ಜಾಗವನ್ನು ಒತ್ತುವರಿ ಮಾಡಿಕೊಂಡು ಶೆಡ್‌ಗಳು ಹಾಗೂ ಇತರೆ ವಸ್ತುಗಳನ್ನು ಇರಿಸಿದ್ದರು. ಇದರಿಂದ ರಸ್ತೆಯ ಅಗಲ ಕಡಿಮೆಯಾಗಿ ಬಸ್‌ಗಳ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತಿತ್ತು. ಸಾರ್ವಜನಿಕರು ಹಾಗೂ ವಾಹನ ಸವಾರರು ಪ್ರತಿನಿತ್ಯ ತೊಂದರೆ ಅನುಭವಿಸುವಂತಾಗಿತ್ತು.

ಈ ಹಿನ್ನೆಲೆಯಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಅವರ ನೇತೃತ್ವದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ತೆರಳಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿದರು. ಅಂಗಡಿಗಳ ಮುಂಭಾಗದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ಶೆಡ್‌ಗಳು ಹಾಗೂ ರಸ್ತೆಗೆ ಅಡ್ಡಿಯಾಗಿದ್ದ ವಸ್ತುಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯಕ್, ಸಾರ್ವಜನಿಕ ಸ್ಥಳಗಳು ಹಾಗೂ ರಸ್ತೆಗಳನ್ನು ಎಲ್ಲರೂ ಜವಾಬ್ದಾರಿಯಿಂದ ಬಳಸಬೇಕು. ಪ್ರತಿಯೊಬ್ಬರೂ ಸಹಕಾರ ಮನೋಭಾವ ಬೆಳೆಸಿಕೊಳ್ಳಬೇಕು. ತಮಗೆ ಮೀಸಲಿರುವ ಜಾಗವನ್ನು ಬಳಸಿಕೊಳ್ಳುವ ಬದಲು ಹೆಚ್ಚುವರಿಯಾಗಿ ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿಕೊಳ್ಳುವುದು ಇತರರಿಗೆ ತೊಂದರೆ ಉಂಟುಮಾಡುತ್ತದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿಯೂ ಪಟ್ಟಣದ ವಿವಿಧೆಡೆ ಸಾರ್ವಜನಿಕ ರಸ್ತೆಗಳು ಹಾಗೂ ಸ್ಥಳಗಳಲ್ಲಿ ಒತ್ತುವರಿ ಕಂಡುಬಂದಲ್ಲಿ ನಿಯಮಾನುಸಾರ ತೆರವುಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯ ಅಭಿಯಂತರರಾದ ಶ್ರುತಿ, ಪೌರಕಾರ್ಮಿಕರ ನೌಕರರ ಸಂಘದ ಅಧ್ಯಕ್ಷ ಚಿನ್ನಪ್ಪ, ಅಸ್ಲಾಂ, ಸಿಬ್ಬಂದಿ ಮೊದಿನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಸ್ತೆ ಅಭಿವೃದ್ಧಿ ಕಾಮಗಾರಿಯಲ್ಲಿ ಹಳೆಯ ಜಲ್ಲಿ ಬಳಕೆ ಆರೋಪ

ಗುಣಮಟ್ಟದ ಬಗ್ಗೆ ಗ್ರಾಮಸ್ಥರ ಅನುಮಾನ

“ಮುಂಜಾನೆಯ ಮೆರಗು”

ಜಗಳೂರು ನ, 12– ತಾಲೂಕಿನ ಅರಸಿನಗುಂಡಿ ಗ್ರಾಮದ ಕ್ರಾಸ್‌ನಿಂದ ತೊರಣಗಟ್ಟೆ ಕ್ರಾಸ್‌ವರೆಗೆ ಲೋಕೋಪಯೋಗಿ ಇಲಾಖೆಯ ವತಿಯಿಂದ ಸುಮಾರು 1.50 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ. ಆದರೆ ಕಾಮಗಾರಿಯಲ್ಲಿ ಹಳೆಯ ರಸ್ತೆಯ ಜಲ್ಲಿಯನ್ನೇ ಮರುಬಳಕೆ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದ್ದು, ರಸ್ತೆ ಗುಣಮಟ್ಟದ ಬಗ್ಗೆ ಸಾರ್ವಜನಿಕರಲ್ಲಿ ಹಲವು ಅನುಮಾನಗಳು ಮೂಡಿವೆ.

ಅರಸಿನಗುಂಡಿ ಸಮೀಪದ ಹಳೆಯ ರಸ್ತೆಯನ್ನು ಸಂಪೂರ್ಣವಾಗಿ ಕಿತ್ತುಹಾಕಿ ಹೊಸದಾಗಿ ರಸ್ತೆ ನಿರ್ಮಿಸುವ ಕಾಮಗಾರಿ ನಡೆಯುತ್ತಿದೆ. ಆದರೆ ಹಳೆಯ ರಸ್ತೆಯನ್ನು



ತೆರವುಗೊಳಿಸಿದ ಬಳಿಕ ದೊರೆಯುವ ಜಲ್ಲಿಯನ್ನು ಮತ್ತೆ ಕಾಮಗಾರಿಗೆ ಬಳಸಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಹೊಸ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಗುಣಮಟ್ಟದ ಜಲ್ಲಿಯನ್ನು ಬಳಸಬೇಕಾದ ಸಂದರ್ಭದಲ್ಲಿ ಹಳೆಯ ಜಲ್ಲಿಯನ್ನೇ ಮರುಬಳಕೆ ಮಾಡುತ್ತಿರುವುದು ಕಾಮಗಾರಿಯ ಬಾಳಿಕೆ ಹಾಗೂ ಗುಣಮಟ್ಟದ ಮೇಲೆ ಪರಿಣಾಮ ಬೀರಬಹುದೆಂಬ ಆತಂಕ ಗ್ರಾಮಸ್ಥರನ್ನು ಕಾಡುತ್ತಿದೆ.

ಶಾಸಕ ಬಿ. ದೇವೇಂದ್ರಪ್ಪ ಅವರು ಕ್ಷೇತ್ರದ ಅಭಿವೃದ್ಧಿಗಾಗಿ ಸಾಕಷ್ಟು ಪ್ರಯತ್ನಪಟ್ಟು ಅನುದಾನ ತರುತ್ತಿದ್ದಾರೆ. ಆದರೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕಾಮಗಾರಿಯ ಮೇಲೆ ಸಮರ್ಪಕ ಮೇಲ್ವಿಚಾರಣೆ ವಹಿಸದಿದ್ದರೆ ಸರ್ಕಾರದ



ಹಣ ಸದ್ಬಳಕೆಯಾಗುವುದಾದರೂ ಹೇಗೆ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಇನ್ನೊಂದೆಡೆ, ಸುಮಾರು ಒಂದು ಕಿಲೋಮೀಟರ್‌ವರೆಗೆ ಮಾತ್ರ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಂಡು, ಉಳಿದ ಭಾಗದಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸಕ್ಕೆ ಸೀಮಿತಗೊಳಿಸಲಾಗುತ್ತಿದೆ ಎಂಬ ಆಕ್ಷೇಪವೂ ವ್ಯಕ್ತವಾಗಿದೆ. ಸಂಪೂರ್ಣ ರಸ್ತೆಯನ್ನು ಸಮರ್ಪಕವಾಗಿ ಅಭಿವೃದ್ಧಿಪಡಿಸುವ ಬದಲು ಅಲ್ಲಲ್ಲಿ ಗುಂಡಿಗಳನ್ನು ಮುಚ್ಚುವ ಮೂಲಕ ಕಾಮಗಾರಿ ಮುಗಿಸುವ ಪ್ರಯತ್ನ ನಡೆಯುತ್ತಿದೆ ಎಂಬುದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ.

ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಗೆ ಬಳಸುತ್ತಿರುವ ಸಾಮಗ್ರಿಗಳ ಗುಣಮಟ್ಟ ಪರಿಶೀಲಿಸಬೇಕು. ಸರ್ಕಾರದ ಅನುದಾನಕ್ಕೆ ತಕ್ಕಂತೆ ನಿಯಮಾನುಸಾರ ಹಾಗೂ ದೀರ್ಘಕಾಲ ಬಾಳಿಕೆ ಬರುವ ರೀತಿಯಲ್ಲಿ ರಸ್ತೆ ನಿರ್ಮಿಸಬೇಕು. ಕಾಮಗಾರಿಯಲ್ಲಿ ಲೋಪದೋಷಗಳಿದ್ದರೆ ಸರಿಪಡಿಸಿ, ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗುವಂತೆ ಗುಣಮಟ್ಟದ ರಸ್ತೆ ನಿರ್ಮಿಸಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಹಳೆ ಜಲ್ಲಿಯಾದರು ಬಳಕೆಗೆ ಯೋಗ್ಯವಿದ್ದರೆ ಕಾಮಗಾರಿಗೆಬಳಸಲು ಅವಕಾಶ ವಿದೆ ಎನ್ನುತ್ತಾರೆ ಲೋಕೊಪಾಯೋಗಿಇಲಾಖೆಯ ಎ.ಇ. ಪುರುಷೊತ್ತು ರೆಡ್ಡಿ

ಗ್ರಾಮ ಪಂಚಾಯಿತಿ ಬೋರ್‌ವೆಲ್‌ಗೆ ರೈತರ ಕನ್ನ: ಕುಡಿಯುವ ನೀರಿನ ಬದಲು ಜಮೀನುಗಳಿಗೆ ನೀರು ಪೂರೈಕೆ!

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ । ಬೋರ್‌ವೆಲ್‌ಗಳನ್ನು ಪಂಚಾಯಿತಿ ಸುಪರ್ದಿಗೆ ಪಡೆಯಲು ಒತ್ತಾಯ

“ಮುಂಜಾನೆಯ ಮೆರಗು”

ಜಗಳೂರು ನ, 12– ಗ್ರಾಮ ಪಂಚಾಯಿತಿಗೆ ಸೇರಿದ ಸಾರ್ವಜನಿಕ ಬೋರ್‌ವೆಲ್‌ನ್ನು ಕೆಲ ಪ್ರಭಾವಿ ರೈತರು ತಮ್ಮ ಜಮೀನುಗಳಿಗೆ ನೀರು ಹಾಯಿಸಿಕೊಳ್ಳಲು ಬಳಸಿಕೊಳ್ಳುತ್ತಿದ್ದಾರೆ ಎಂಬ ಗಂಭೀರ ಆರೋಪ ತಾಲೂಕಿನ ಗುರುಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೆಂಕಟೇಶಪುರ ಗ್ರಾಮದಿಂದ ಕೇಳಿಬಂದಿದೆ.

ವೆಂಕಟೇಶಪುರ ಗ್ರಾಮದಲ್ಲಿ ಸುಮಾರು 1,500 ಜನಸಂಖ್ಯೆಯಿದ್ದು, ಗ್ರಾಮಸ್ಥರ ಕುಡಿಯುವ ನೀರಿನ ಅಗತ್ಯಕ್ಕಾಗಿ ಒಟ್ಟು ಏಳು ಬೋರ್‌ವೆಲ್‌ಗಳನ್ನು ಕೊರೆಸಲಾಗಿದೆ. ಇವುಗಳಲ್ಲಿ ಒಂದು ಬೋರ್‌ವೆಲ್ ಕೆಟ್ಟುಹೋಗಿದ್ದು, ಉಳಿದ ಆರು ಬೋರ್‌ವೆಲ್‌ಗಳು ಕಾರ್ಯನಿರ್ವಹಿಸುತ್ತಿವೆ ಎನ್ನಲಾಗಿದೆ. ಆದರೆ, ಗ್ರಾಮಕ್ಕೆ ಕುಡಿಯುವ ನೀರು ಪೂರೈಸಬೇಕಾದ ಬೋರ್‌ವೆಲ್‌ಗಳ ಪೈಕಿ ವೆಂಕಟೇಶಪುರದಿಂದ ಗೌಡಿಕಟ್ಟೆ ಗ್ರಾಮಕ್ಕೆ ತೆರಳುವ ಒಳರಸ್ತೆಯಲ್ಲಿರುವ ಗ್ರಾಮ ಪಂಚಾಯಿತಿಗೆ ಸೇರಿದ ಬೋರ್‌ವೆಲ್‌ನ್ನು ಕೆಲ ರೈತರು ತಮ್ಮ ಜಮೀನುಗಳಿಗೆ ನೀರು ಹರಿಸಿಕೊಳ್ಳಲು ಬಳಸಿಕೊಳ್ಳುತ್ತಿದ್ದಾರೆ ಎಂಬ ದೂರು ವ್ಯಕ್ತವಾಗಿದೆ.

ಬರದ ನಡುವೆ ನೀರಿನ ದುರ್ಬಳಕೆ!

ತಾಲೂಕಿನಲ್ಲಿ ಮಳೆ ಕೊರತೆಯಿಂದ ಬರದ ಪರಿಸ್ಥಿತಿ ತೀವ್ರಗೊಂಡಿದ್ದು, ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ. ಇಂತಹ ಸಂದರ್ಭದಲ್ಲಿ ಲಭ್ಯವಿರುವ ಅಂತರ್ಜಲವನ್ನು ಸಂರಕ್ಷಿಸಿ, ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕಾದ ಗ್ರಾಮ ಪಂಚಾಯಿತಿ ಅಧಿಕಾರಿಗಳು



ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪ ಗ್ರಾಮಸ್ಥರಿಂದ ಕೇಳಿಬಂದಿದೆ.

ಕಳೆದ ಭಾನುವಾರ ಗುರುಸಿದ್ದಾಪುರ ಗ್ರಾಮದಲ್ಲಿ 57 ಕೆರೆಗಳಿಗೆ ನೀರು ತುಂಬಿಸುವ ಮಹತ್ವಾಕಾಂಕ್ಷಿ ಯೋಜನೆ ಸಾಕಾರಗೊಂಡ ಹಿನ್ನೆಲೆಯಲ್ಲಿ ನಡೆದ ಸಂಭ್ರಮದ ಕಾರ್ಯಕ್ರಮಕ್ಕೆ ಆಗಮಿಸುತ್ತಿದ್ದ ಗ್ರಾಮಸ್ಥರು, ತಮ್ಮ ಗ್ರಾಮದಲ್ಲಿನ ಬೋರ್‌ವೆಲ್ ದುರ್ಬಳಕೆಯ ಸಮಸ್ಯೆ ಕುರಿತು ಪರಸ್ಪರ ಚರ್ಚಿಸುತ್ತಿರುವುದು ಕಂಡುಬಂದಿದೆ. ಒಂದು ಕಡೆ ಕೆರೆಗಳಿಗೆ ನೀರು ತುಂಬಿಸುವ ಮೂಲಕ ಅಂತರ್ಜಲ ಹೆಚ್ಚಿಸುವ ಪ್ರಯತ್ನ ನಡೆಯುತ್ತಿದ್ದರೆ, ಮತ್ತೊಂದೆಡೆ ಸಾರ್ವಜನಿಕ ಬೋರ್‌ವೆಲ್‌ಗಳ ನೀರನ್ನು ಖಾಸಗಿ ಜಮೀನುಗಳಿಗೆ ಬಳಸಿಕೊಳ್ಳುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸಾರ್ವಜನಿಕ ಬೋರ್‌ವೆಲ್‌ಗಳ ನಿರ್ವಹಣೆ ಹಾಗೂ ನೀರಿನ ಸಮರ್ಪಕ ಬಳಕೆಯ ಮೇಲ್ವಿಚಾರಣೆ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಆದರೆ, ಸಾರ್ವಜನಿಕ ಉದ್ದೇಶಕ್ಕೆ ಮೀಸಲಾದ ಬೋರ್‌ವೆಲ್‌ನ್ನು ಖಾಸಗಿ ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸದಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಪಂಚಾಯಿತಿಗೆ ಸೇರಿದ ಎಲ್ಲ ಬೋರ್‌ವೆಲ್‌ಗಳನ್ನು ಪಂಚಾಯಿತಿ ಸುಪರ್ದಿಗೆ ಪಡೆದು, ಅವುಗಳ ನೀರನ್ನು ಸಾರ್ವಜನಿಕರ ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸುವಂತೆ ಕ್ರಮ ಕೈಗೊಳ್ಳಬೇಕು. ಖಾಸಗಿ ಜಮೀನುಗಳಿಗೆ ನೀರು ಹರಿಸುವುದನ್ನು ತಕ್ಷಣವೇ ತಡೆದು, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ಸಾಮಾಜಿಕ ಹೋರಾಟಗಾರರು ಒತ್ತಾಯಿಸಿದ್ದಾರೆ.

ಪಂಚಾಯಿತಿ ಸುಪರ್ದಿಗೆ ಪಡೆಯಲು ಸೂಚನೆ: ಕೆಂಚಪ್ಪ

ಗ್ರಾಮ ಪಂಚಾಯಿತಿಗೆ ಸೇರಿದ ಬೋರ್‌ವೆಲ್‌ನ್ನು ಖಾಸಗಿ ಬಳಕೆಗೆ ಬಳಸಿಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. ಈ ಕುರಿತು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ (ಪಿಡಿಒ) ಸೂಚನೆ ನೀಡಿ, ಬೋರ್‌ವೆಲ್‌ನ್ನ

ದಾವಣಗೆರೆಯ ಹೆಗ್ಗುರುತುಗಳ ಸಂರಕ್ಷಣೆ ಜತೆಗೆ ಅಭಿವೃದ್ಧಿಗೆ ಆದ್ಯತೆ: ಸಚಿವ ಎಸ್.ಎಸ್. ಮಲ್ಲಿಕಾರ್ಜುನ್

ಗುಂಡಿ ಮಹದೇವಪ್ಪ ವೃತ್ತಕ್ಕೆ ನವೀಕರಣದ ಮೆರುಗು: ಪುಟಾಣಿ ಮಕ್ಕಳೊಂದಿಗೆ ಫುಟ್ಬಾಲ್ ವೃತ್ತ ಉದ್ಘಾಟನೆ

"ಮುಂಜಾನೆಯ ಮೆರಗು"

ದಾವಣಗೆರೆ, ನ.12– ನಗರದ ಐತಿಹಾಸಿಕ ಹೆಗ್ಗುರುತುಗಳನ್ನು ಸಂರಕ್ಷಿಸುವುದರ ಜತೆಗೆ ಆಧುನಿಕ ಮೂಲಸೌಕರ್ಯಗಳನ್ನು ಕಲ್ಪಿಸಿ ದಾವಣಗೆರೆಯನ್ನು ಮತ್ತಷ್ಟು ಸುಂದರ ಹಾಗೂ ಸುಸಜ್ಜಿತ ನಗರವನ್ನಾಗಿ ರೂಪಿಸುವುದು ನಮ್ಮ ಉದ್ದೇಶವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹೇಳಿದರು.



ನಗರದ ಐತಿಹಾಸಿಕ ಗುಂಡಿ ಮಹದೇವಪ್ಪ ವೃತ್ತ (ಡಾ. ಎಂ.ಸಿ. ಮೋದಿ ವೃತ್ತ)ವನ್ನು ನವೀಕರಿಸಿದ ಹಿನ್ನೆಲೆಯಲ್ಲಿ ಬುಧವಾರ ಪುಟಾಣಿ ಮಕ್ಕಳೊಂದಿಗೆ ನೂತನ ಫುಟ್ಬಾಲ್ ವೃತ್ತವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸುಮಾರು 28 ವರ್ಷಗಳ ಹಿಂದೆ ಫಿಫಾ ಫುಟ್ಬಾಲ್ ವಿಶ್ವಕಪ್ ಸ್ಮರಣಾರ್ಥ ಈ ವೃತ್ತವನ್ನು ನಿರ್ಮಿಸಲಾಗಿತ್ತು. ಅಂದಿನಿಂದಲೂ ಇದು ದಾವಣಗೆರೆ ನಗರದ ಪ್ರಮುಖ ಗುರುತಾಗಿ ಗುರುತಿಸಿಕೊಂಡಿದೆ. ಕಾಲಕ್ರಮೇಣ ವೃತ್ತದ ಹೊರಭಾಗ ಶಿಥಿಲಗೊಂಡಿದ್ದರಿಂದ ಅದರ ಮೂಲ ಸ್ವರೂಪ ಮತ್ತು ಐತಿಹಾಸಿಕ ಮಹತ್ವಕ್ಕೆ ಧಕ್ಕೆಯಾಗದಂತೆ ಆಧುನಿಕ ವಿನ್ಯಾಸದಲ್ಲಿ ನವೀಕರಿಸಲಾಗಿದೆ ಎಂದು ತಿಳಿಸಿದರು.

ನಗರದ ಅಭಿವೃದ್ಧಿ ಎಂದರೆ ಕೇವಲ ರಸ್ತೆ, ಕಟ್ಟಡಗಳ ನಿರ್ಮಾಣಕ್ಕೆ ಸೀಮಿತವಾಗಬಾರದು. ನಗರದ ಇತಿಹಾಸ, ಪರಂಪರೆ ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯಗಳನ್ನು ಉಳಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸುವುದೂ ಅಷ್ಟೇ ಮುಖ್ಯ. ಈ ಹಿನ್ನೆಲೆಯಲ್ಲಿ ಗುಂಡಿ ಮಹದೇವಪ್ಪ ವೃತ್ತವನ್ನು ವಿಶೇಷ ಕಾಳಜಿಯಿಂದ ನವೀಕರಿಸಲಾಗಿದೆ ಎಂದರು.

900 ಕೆ.ಜಿ. ತೂಕದ ಫುಟ್ಬಾಲ್ ಕಲಾಕೃತಿ

ನವೀಕೃತ ವೃತ್ತದಲ್ಲಿ ಸುಮಾರು 900 ಕೆ.ಜಿ. ತೂಕದ ಸ್ಟೇನ್ಲೆಸ್ ಸ್ಟೀಲ್ನ ಬೃಹತ್ ಫುಟ್ಬಾಲ್ ಕಲಾಕೃತಿಯನ್ನು ಅಳವಡಿಸಲಾಗಿದೆ. ಗ್ರೇಡ್–304 ಗುಣಮಟ್ಟದ ಸ್ಟೇನ್ಲೆಸ್ ಸ್ಟೀಲ್ನಿಂದ ನಿರ್ಮಿಸಿರುವ ಈ ಕಲಾಕೃತಿಯನ್ನು ಕಲಾತ್ಮಕ ಕೈಯ ಮೂರು ಬೆರಳುಗಳ ಮೇಲೆ ಫುಟ್ಬಾಲ್ ನಿಂತಿರುವಂತೆ ಆಕರ್ಷಕವಾಗಿ ವಿನ್ಯಾಸಗೊಳಿಸಲಾಗಿದೆ.

ನಗರದ ಸೌಂದರ್ಯಕ್ಕೆ ಹೊಸ ಮೆರುಗು

ದಾವಣಗೆರೆ ನಗರವು ಶಿಕ್ಷಣ, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ತನ್ನದೇ ಆದ ವಿಶಿಷ್ಟ ಗುರುತನ್ನು ಹೊಂದಿದೆ. ಅದಕ್ಕೆ ತಕ್ಕಂತೆ ನಗರದ ಪ್ರಮುಖ ವೃತ್ತಗಳು, ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ. ನಗರದ ಸೌಂದರ್ಯ ಹೆಚ್ಚಿಸುವುದರ ಜತೆಗೆ ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರಕ್ಕೂ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ವೃತ್ತದ ಸುತ್ತ ಆಕರ್ಷಕ ವಿದ್ಯುತ್ ದೀಪಾಲಂಕಾರ, ಹಸಿರು ಪರಿಸರ ಹಾಗೂ ಪಾದಚಾರಿಗಳಿಗೆ ಅನುಕೂಲವಾಗುವ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ವಿಶೇಷವಾಗಿ ರಾತ್ರಿ ವೇಳೆಯಲ್ಲಿ ಫುಟ್ಬಾಲ್ ಕಲಾಕೃತಿ ಆಕರ್ಷಕವಾಗಿ ಕಂಗೊಳಿಸುವಂತೆ ವಿನ್ಯಾಸಗೊಳಿಸಲಾಗಿದೆ ಎಂದರು.



ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ದಾವಣಗೆರೆಯ ಐತಿಹಾಸಿಕ ಗುಂಡಿ ಮಹದೇವಪ್ಪ ವೃತ್ತವು ನಗರದ ಜನರೊಂದಿಗೆ ಭಾವನಾತ್ಮಕ ನಂಟು ಹೊಂದಿರುವ ಪ್ರಮುಖ ಹೆಗ್ಗುರುತಾಗಿದೆ. ಸುಮಾರು 28 ವರ್ಷಗಳ ಇತಿಹಾಸ ಹೊಂದಿರುವ ಈ ವೃತ್ತಕ್ಕೆ ಆಧುನಿಕ ಸ್ಪರ್ಶ ನೀಡಿರುವುದು ಸಂತಸದ ಸಂಗತಿ. ನಗರದ ಪರಂಪರೆಯನ್ನು ಉಳಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಪುಟಾಣಿ ಮಕ್ಕಳೊಂದಿಗೆ ವೃತ್ತವನ್ನು ಉದ್ಘಾಟಿಸಿರುವುದು ವಿಶೇಷವಾಗಿದ್ದು, ಮಕ್ಕಳಲ್ಲಿ ಕ್ರೀಡಾಸಕ್ತಿ ಬೆಳೆಸುವ ಉತ್ತಮ ಸಂದೇಶವನ್ನು ಸಾರಿದೆ. ದಾವಣಗೆರೆಯನ್ನು ಸ್ವಚ್ಛ, ಸುಂದರ ಹಾಗೂ ಸುಸಜ್ಜಿತ ನಗರವನ್ನಾಗಿ ರೂಪಿಸಲು ಸಾರ್ವಜನಿಕರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಸಕ ಸಮರ್ಥ್ ಶಾಮನೂರು, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಜ್.ಟಿ. ಶೇಖರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಾಹಿತ್ಯ ಎಂ. ಆಲದಕಟ್ಟಿ, ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಮುಖಂಡರು ಹಾಗೂ ಸಾರ್ವನಿಕರು ಉಪಸ್ಥಿತರಿದ್ದರು.

ಜರ್ಮಲಿ ಗ್ರಾಮದಲ್ಲಿ ಆರೋಗ್ಯ ಉಪಕೇಂದ್ರ ಕಾಮಗಾರಿ ಪರಿಶೀಲಿಸಿದ ಶಾಸಕ ಡಾ. ಶ್ರೀನಿವಾಸ್ ಎನ್.ಟಿ.

"ಮುಂಜಾನೆಯ ಮೆರಗು"

ಕೂಡ್ಲಿಗಿ ನ, 12– ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ಜರ್ಮಲಿ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಆರೋಗ್ಯ ಉಪಕೇಂದ್ರದ ಕಾಮಗಾರಿಯನ್ನು ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಕಾಮಗಾರಿಯ ಪ್ರಗತಿ ಹಾಗೂ ಗುಣಮಟ್ಟದ ಕುರಿತು ಮಾಹಿತಿ ಪಡೆದ ಅವರು, ಕಾಮಗಾರಿ ನಿರತ ಕಾರ್ಮಿಕರೊಂದಿಗೆ ಆತ್ಮೀಯವಾಗಿ ಮಾತನಾಡಿ ಅವರ ಸಮಸ್ಯೆ ಮತ್ತು ಕುಂದುಕೊರತೆಗಳನ್ನು ಆಲಿಸಿದರು.

ಸ್ವತಃ ವೈದ್ಯರಾಗಿರುವ ಶಾಸಕ ಡಾ. ಶ್ರೀನಿವಾಸ್ ಅವರು ಗ್ರಾಮೀಣ ಜನರಿಗೆ ಉತ್ತಮ ವೈದ್ಯಕೀಯ ಸೌಲಭ್ಯಗಳು ಸ್ಥಳೀಯವಾಗಿಯೇ ಲಭ್ಯವಾಗಬೇಕು ಎಂಬ ಉದ್ದೇಶದಿಂದ ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದಾರೆ. ಪ್ರತಿಯೊಬ್ಬರಿಗೂ ಗುಣಮಟ್ಟದ ಆರೋಗ್ಯ ಸೇವೆ ದೊರೆಯುವಂತಾಗಬೇಕು ಹಾಗೂ ಆರೋಗ್ಯವಂತ ಸಮಾಜ ನಿರ್ಮಾಣವಾಗಬೇಕು ಎಂಬ ಆಶಯದೊಂದಿಗೆ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಅಗತ್ಯ ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡುತ್ತಿದ್ದಾರೆ.

ಗ್ರಾಮೀಣ ಪ್ರದೇಶದ ಜನರಿಗೆ ಆರೋಗ್ಯ ಸೇವೆಗಳು ಸುಲಭವಾಗಿ ತಲುಪುವಂತೆ ಆರೋಗ್ಯ ಉಪಕೇಂದ್ರಗಳ ನಿರ್ಮಾಣ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಮಹತ್ವದ್ದಾಗಿದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.



ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು ಗ್ರಾಮಸ್ಥರು ಉಪಸ್ಥಿತರಿದ್ದರು.

ಭಾರತ್ ಸಮಿಟ್ 2026ಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಆಹ್ವಾನ

"ಮುಂಜಾನೆಯ ಮೆರಗು"

ಬೆಂಗಳೂರು ನ, 12– ತೆಲಂಗಾಣದ ಉಪಮುಖ್ಯಮಂತ್ರಿ ಮಲ್ಲು ಭಟ್ಟಿ ವಿಕ್ರಮಾರ್ಕ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಇಂದು ಭೇಟಿ ಮಾಡಿ, ಹೈದರಾಬಾದ್‌ನಲ್ಲಿ ನವೆಂಬರ್ 13 ಮತ್ತು 14ರಂದು ನಡೆಯಲಿರುವ 'ಭಾರತ್ ಸಮಿಟ್ 2026'ರಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದರು.



ಈ ಸಂದರ್ಭದಲ್ಲಿ ಸಮಾವೇಶದ ಉದ್ದೇಶ ಹಾಗೂ ಕಾರ್ಯಕ್ರಮಗಳ ಕುರಿತು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಸುಮಾರು 70 ದೇಶಗಳ ರಾಜಕೀಯ ನಾಯಕರು, ನೀತಿ ನಿರೂಪಕರು, ಶಿಕ್ಷಣ ತಜ್ಞರು, ಉದ್ಯಮ ಕ್ಷೇತ್ರದ ಪ್ರತಿನಿಧಿಗಳು ಹಾಗೂ ನಾಗರಿಕ ಸಮಾಜದ ಸದಸ್ಯರು ಈ ಜಾಗತಿಕ ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಜಾಗತಿಕ ಸವಾಲುಗಳು, ಪ್ರಜಾಸತ್ತಾತ್ಮಕ ಸಂಸ್ಥೆಗಳ ಬಲವರ್ಧನೆ, ಉದಯೋನ್ಮುಖ ತಂತ್ರಜ್ಞಾನಗಳು ಹಾಗೂ ಅಂತರರಾಷ್ಟ್ರೀಯ ಸಹಕಾರ ಸೇರಿದಂತೆ ಪ್ರಮುಖ ವಿಷಯಗಳ ಕುರಿತು ಸಮಾವೇಶದಲ್ಲಿ ಚರ್ಚೆ ನಡೆಯಲಿದೆ.

ವಿವಿಧ ದೇಶಗಳ ಪ್ರತಿನಿಧಿಗಳು ಒಂದೇ ವೇದಿಕೆಯಲ್ಲಿ ಸೇರಿ ಜಾಗತಿಕ ಸಮಸ್ಯೆಗಳು ಮತ್ತು ಭವಿಷ್ಯದ ಸವಾಲುಗಳ ಕುರಿತು ವಿಚಾರ ವಿನಿಮಯ ನಡೆಸಲು ಭಾರತ್ ಸಮಿಟ್ 2026 ವೇದಿಕೆಯಾಗಲಿದೆ.

ನ್ಯಾಮತಿ ಭಾಗದಲ್ಲಿ ಅಡುಗೆ ಅನಿಲ ಪೂರೈಕೆ ವಿಳಂಬ: ಏಜೆನ್ಸಿ ವಿರುದ್ಧ ಕ್ರಮಕ್ಕೆ ಶಾಸಕ ಶಾಂತನಗೌಡ ಸೂಚನೆ

"ಮುಂಜಾನೆಯ ಮೆರಗು"

ನ್ಯಾಮತಿ ನ, 12– ನ್ಯಾಮತಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಳೆದ ಕೆಲವು ದಿನಗಳಿಂದ ಅಡುಗೆ ಅನಿಲ ಪೂರೈಕೆಯಲ್ಲಿ ವಿಳಂಬವಾಗುತ್ತಿರುವ ಕುರಿತು ಗ್ರಾಹಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಶಾಸಕ ಶಾಂತನಗೌಡ ಅವರು ಆಹಾರ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆ ಪರಿಹಾರಕ್ಕೆ ಸೂಚನೆ ನೀಡಿದರು.

ಇಂದು ನ್ಯಾಮತಿ ಪಟ್ಟಣಕ್ಕೆ ಆಹಾರ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಕರೆಸಿಕೊಂಡು ಅಡುಗೆ ಅನಿಲ ಪೂರೈಕೆಯಲ್ಲಿನ ಸಮಸ್ಯೆಗಳ ಕುರಿತು ಚರ್ಚಿಸಿದರು. ಗ್ರಾಹಕರಿಗೆ ಸಕಾಲದಲ್ಲಿ ಅಡುಗೆ ಅನಿಲ ದೊರೆಯದೆ ತೊಂದರೆಯಾಗುತ್ತಿರುವ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದರು.



ನ್ಯಾಮತಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗ್ರಾಹಕರಿಗೆ ಯಾವುದೇ ಅನಾನುಕೂಲವಾಗದಂತೆ ನಿಗದಿತ ಸಮಯದಲ್ಲಿ ಅಡುಗೆ ಅನಿಲ ಪೂರೈಕೆ ಮಾಡುವ ವ್ಯವಸ್ಥೆ ಕಲ್ಪಿಸಬೇಕು. ವಿತರಣೆಯಲ್ಲಿ ವಿಳಂಬವಾಗದಂತೆ ಸಂಬಂಧಪಟ್ಟ ಏಜೆನ್ಸಿಯ ಕಾರ್ಯವೈಖರಿಯ ಮೇಲೆ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮುಂದಿನ ದಿನಗಳಲ್ಲಿಯೂ ಇದೇ ರೀತಿ ಗ್ರಾಹಕರಿಗೆ ಸಕಾಲದಲ್ಲಿ ಅಡುಗೆ ಅನಿಲ ಪೂರೈಕೆ ಮಾಡದಿದ್ದರೆ ಸಂಬಂಧಪಟ್ಟ ಏಜೆನ್ಸಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಶಾಂತನಗೌಡ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸಾರ್ವಜನಿಕರಿಗೆ ಅಗತ್ಯವಿರುವ ಅಡುಗೆ ಅನಿಲ ಸಕಾಲದಲ್ಲಿ ದೊರೆಯುವಂತೆ ಇಲಾಖೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ನೂತನ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಆರ್. ಷಣ್ಮುಖಪ್ಪ ಅವರಿಗೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅಭಿನಂದನೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 12– ದಾವಣಗೆರೆ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ (ಡಿಸಿಸಿ ಬ್ಯಾಂಕ್) ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಜಿ.ಆರ್. ಷಣ್ಮುಖಪ್ಪ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರು ಆತ್ಮೀಯವಾಗಿ ಸ್ವಾಗತಿಸಿ ಅಭಿನಂದಿಸಿದರು.



ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರ ನಿವಾಸಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ನೂತನ ಅಧ್ಯಕ್ಷರಿಗೆ ಶುಭಾಶಯ ಕೋರಿ, ಅವರ ಮುಂದಿನ ಜವಾಬ್ದಾರಿಗಳು ಯಶಸ್ವಿಯಾಗಿ ಸಾಗಲಿ ಎಂದು ಹಾರೈಸಿದರು.

ಸಹಕಾರ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ಮೂಲಕ ರೈತರು, ಸಹಕಾರಿ ಸಂಘಗಳ ಸದಸ್ಯರು ಹಾಗೂ ಸಾರ್ವಜನಿಕರ ಆರ್ಥಿಕ ಸಬಲೀಕರಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಡಿಸಿಸಿ ಬ್ಯಾಂಕ್ ಮೂಲಕ ರೈತಸ್ನೇಹಿ ಹಾಗೂ ಜನಪರ ಸೇವೆಗಳನ್ನು ವಿಸ್ತರಿಸಿ, ಬ್ಯಾಂಕಿನ ಪ್ರಗತಿಗೆ ಶ್ರಮಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಜಿ.ಆರ್. ಷಣ್ಮುಖಪ್ಪ ಅವರ ನೇತೃತ್ವದಲ್ಲಿ ಡಿಸಿಸಿ ಬ್ಯಾಂಕ್ ಮತ್ತಷ್ಟು ಅಭಿವೃದ್ಧಿ ಸಾಧಿಸಿ, ಸಹಕಾರ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲುಗಳನ್ನು ಸ್ಥಾಪಿಸಲಿ ಎಂದು ಸಚಿವರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

ಮಹಿಳೆಯರ ದೂರುಗಳಿಗೆ ತ್ವರಿತ ಸ್ಪಂದನೆ ನೀಡಿ: ಪೊಲೀಸ್ ಅಧಿಕಾರಿಗಳಿಗೆ ಡಾ. ನಾಗಲಕ್ಷ್ಮೀ ಚೌಧರಿ ಸೂಚನೆ

"ಮುಂಜಾನೆಯ ಮೆರಗು"

ಹಗರಿಬೊಮ್ಮನಹಳ್ಳಿ ನ, 12– ಮಹಿಳೆಯರಿಗೆ ಪೊಲೀಸ್ ಇಲಾಖೆಯಿಂದ ತ್ವರಿತ ಹಾಗೂ ಪರಿಣಾಮಕಾರಿ ಸೇವೆ ಒದಗಿಸುವುದರೊಂದಿಗೆ, ಅವರ ಸಮಸ್ಯೆಗಳಿಗೆ ಸೂಕ್ತವಾಗಿ ಸ್ಪಂದಿಸಿ ನ್ಯಾಯ ದೊರಕಿಸಿಕೊಡಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ವಿಜಯನಗರ ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಪೊಲೀಸ್ ಠಾಣೆಗೆ ಭೇಟಿ ನೀಡಿದ ಅವರು, ಠಾಣೆಯಲ್ಲಿನ ಮೂಲಸೌಕರ್ಯ ವ್ಯವಸ್ಥೆ ಹಾಗೂ ಮಹಿಳೆಯರಿಗೆ ಒದಗಿಸಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ವೇಳೆ ಮಹಿಳೆಯರಿಂದ ಸ್ವೀಕರಿಸಲಾದ ದೂರುಗಳ ನಿರ್ವಹಣೆ, ನಾಪತ್ತೆಯಾದ ಮಹಿಳೆಯರ ಪ್ರಕರಣಗಳು, ಮಹಿಳೆಯರ ವಿರುದ್ಧದ ಅಪರಾಧ ಪ್ರಕರಣಗಳು ಹಾಗೂ ತೆರೆದ ಮನೆ ಕಾರ್ಯಕ್ರಮದ ಕುರಿತು ಪರಿಶೀಲಿಸಿದರು. ಮಹಿಳೆಯರ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ, ಅವುಗಳ ಇತ್ಯರ್ಥಕ್ಕೆ ಆದ್ಯತೆ ನೀಡುವಂತೆ ಸೂಚಿಸಿದರು.

ದೂರುದಾರರೊಬ್ಬರಿಗೆ ಖುದ್ದಾಗಿ ದೂರವಾಣಿ ಕರೆ ಮಾಡಿದ ಡಾ. ನಾಗಲಕ್ಷ್ಮೀ ಚೌಧರಿ, ಸಂಬಂಧಪಟ್ಟ ಮಹಿಳೆಯ ಸಮಸ್ಯೆಗೆ ಪೊಲೀಸರು ಯಾವ ರೀತಿ ಸ್ಪಂದಿಸಿದ್ದಾರೆ ಹಾಗೂ ದೂರಿನ ಪ್ರಸ್ತುತ ಪ್ರಗತಿ ಏನಾಗಿದೆ ಎಂಬುದನ್ನು ವಿಚಾರಿಸಿ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆ ಖಚಿತಪಡಿಸುವ ಕಡ್ಡಾಯವಾಗಿ ಸಭೆ ನಡೆಸಬೇಕು. ಮಹಿಳಾ ಸಿಬ್ಬಂದಿಗೆ ಸುರಕ್ಷಿತ ಹಾಗೂ ಗೌರವಯುತ ಕೆಲಸದ ವಾತಾವರಣ ಕಲ್ಪಿಸುವುದರ ಜತೆಗೆ, ಅವರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಮಹಿಳೆಯರ ಸುರಕ್ಷತೆ, ಹಕ್ಕುಗಳ ರಕ್ಷಣೆ ಹಾಗೂ ದೂರುಗಳ ಪರಿಣಾಮಕಾರಿ ವಿಲೇವಾರಿಗೆ ಪೊಲೀಸ್ ಇಲಾಖೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ತಿಳಿಸಿದರು.

ಹಿರಿಯೂರು ಉಪಚುನಾವಣೆ ಸಿದ್ಧತೆ: ಸಿಎಂ ಡಿ.ಕೆ.ಶಿವಕುಮಾರ್ ಜೊತೆ ಸಚಿವ ಟಿ.ರಘುಮೂರ್ತಿ ಚರ್ಚೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 12– ಮಾಜಿ ಸಚಿವ ಡಿ.ಸುಧಾಕರ್ ಅವರ ನಿಧನದಿಂದ ತೆರವಾಗಿರುವ ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಚಿವರು ಹಾಗೂ ಪಕ್ಷದ ಮುಖಂಡರೊಂದಿಗೆ ಸಮಾಲೋಚನೆ ನಡೆಸುತ್ತಿದ್ದಾರೆ.



ದೀಪಾವಳಿ ಹಬ್ಬದ ಶುಭಾಶಯ ಕೋರಲು ಸದಾಶಿವನಗರದಲ್ಲಿರುವ ಮುಖ್ಯಮಂತ್ರಿ ನಿವಾಸಕ್ಕೆ ಭೇಟಿ ನೀಡಿದ ಸಚಿವ ಟಿ.ರಘುಮೂರ್ತಿ ಅವರು, ಈ ಸಂದರ್ಭದಲ್ಲಿ ಹಿರಿಯೂರು ಉಪಚುನಾವಣೆಯ ಸಿದ್ಧತೆಗಳ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದರು.

ಉಪಚುನಾವಣೆಯ ದಿನಾಂಕ ಶೀಘ್ರದಲ್ಲೇ ಪ್ರಕಟವಾಗುವ ನಿರೀಕ್ಷೆಯ

14 ವರ್ಷದ ಬಾಲಕಿಗೆ 2.50 ಲಕ್ಷ ಮೌಲ್ಯದ ಆಕ್ಸಿಜನ್ ಕಾನ್ಸೆಂಟ್ರೇಟರ್ ಹಸ್ತಾಂತರ



"ಮುಂಜಾನೆಯ ಮೆರಗು"

ಬೆಂಗಳೂರು ನ, 12– ಉಸಿರಾಟದ ಸಮಸ್ಯೆಯಿಂದ ಬಳಲುತ್ತಿರುವ ರಾಮನಗರ ಜಿಲ್ಲೆಯ ಹಾರೋಹಳ್ಳಿ ತಾಲೂಕಿನ ಮರಳವಾಡಿ ಹೋಬಳಿಯ ಸುಂಡಘಟ್ಟ ಗ್ರಾಮದ 14 ವರ್ಷದ ವಿದ್ಯಾರ್ಥಿನಿ ನವ್ಯಶ್ರೀ ಅವರಿಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು 2.50 ಲಕ್ಷ ಮೌಲ್ಯದ ಅತ್ಯಾಧುನಿಕ ಆಕ್ಸಿಜನ್ ಕಾನ್ಸೆಂಟ್ರೇಟರ್ ಒದಗಿಸಿದ್ದಾರೆ.

ನವ್ಯಶ್ರೀ ಅವರು ಚಂದ್ರು ಮತ್ತು ರಾಜಲಕ್ಷ್ಮಿ ದಂಪತಿಯ ಪುತ್ರಿಯಾಗಿದ್ದು, ಅನಾರೋಗ್ಯದಿಂದ ಬಳಲುತ್ತಿರುವ ಪ್ರತಿಭಾವಂತ ವಿದ್ಯಾರ್ಥಿನಿಗೆ ನೆರವು ನೀಡುವಂತೆ ಪೋಷಕರು ಮನವಿ ಮಾಡಿದ್ದರು. ಈ ಮನವಿಗೆ ಸ್ಪಂದಿಸಿದ ಸಚಿವರು ಆಕ್ಸಿಜನ್ ಕಾನ್ಸೆಂಟ್ರೇಟರ್ ಕೊಡಿಸಿ ಹಸ್ತಾಂತರಿಸಿದ್ದಾರೆ.

ಈ ಸಾಧನದ ವಿಶೇಷತೆಯೆಂದರೆ, ಶಾಲಾ ಬ್ಯಾಗ್‌ನಂತೆ ಹೆಗಲಿಗೆ ಹಾಕಿಕೊಂಡು ಸುಲಭವಾಗಿ ಕೊಂಡೊಯ್ಯಬಹುದಾಗಿದೆ. ಇದರಿಂದ ಬಾಲಕಿಗೆ ಅಗತ್ಯವಿರುವ ಸಂದರ್ಭದಲ್ಲಿ ಆಮ್ಲಜನಕದ ನೆರವು ಪಡೆಯಲು ಅನುಕೂಲವಾಗಲಿದೆ.

ನವ್ಯಶ್ರೀ ಅವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಹಾರೈಸಿರುವ ಸಚಿವರು, ಚಿಕಿತ್ಸೆಗೆ ಸಂಬಂಧಿಸಿದ ಮಾಹಿತಿಯನ್ನು ಕಾಲಕಾಲಕ್ಕೆ ತಿಳಿಸುವಂತೆ ಪೋಷಕರಿಗೆ ಸೂಚಿಸಿದ್ದಾರೆ.

ಪ್ರತಿಯೊಬ್ಬರ ಜೀವನದ ಅನುಭವಗಳು ದಾಖಲೆಯಾಗಬೇಕು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್



"ಮುಂಜಾನೆಯ ಮೆರಗು"

ಮೈಸೂರು ನ, 12– ಪ್ರತಿಯೊಬ್ಬರ ಜೀವನದಲ್ಲಿನ ಅನುಭವಗಳು ದಾಖಲೆಯಾಗಬೇಕು. ಸಾಹಿತ್ಯ ಉಳಿಯಬೇಕಾದರೆ ಪುಸ್ತಕಗಳನ್ನು ಬರೆಯುವವರನ್ನು ಸಮಾಜ ಪ್ರೋತ್ಸಾಹಿಸಬೇಕು. ಅದೃಷ್ಟದ ಮೇಲೆ ನಂಬಿಕೆ ಇಡುವ ಬದಲು ಪರಿಶ್ರಮದ ಮೇಲೆ ವಿಶ್ವಾಸವಿಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಮೈಸೂರು ವಿಶ್ವವಿದ್ಯಾಲಯದ ಮಾನಸಗಂಗೋತ್ರಿಯ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ. ರಮ್ಯಾ ವೈ.ಎನ್. ಅವರು ತಮ್ಮ ಜೀವನದ ಅನುಭವಗಳನ್ನು ಆಧರಿಸಿ ರಚಿಸಿರುವ 'ಚಲಿಸುವ ಬಂಡೆ' ಕೃತಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಲೋಕಾರ್ಪಣೆಗೊಳಿಸಿ ಶುಭ ಹಾರೈಸಿದರು.

ಬಳಿಕ ಕಾರ್ಯಕ್ರಮದಲ್ಲಿ ನೆರೆದಿದ್ದವರನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿಯೊಬ್ಬರ ಬದುಕಿನಲ್ಲಿಯೂ ಹಲವು ಅನುಭವಗಳು, ಸವಾಲುಗಳು ಮತ್ತು ಸಾಧನೆಗಳಿರುತ್ತವೆ. ಅವುಗಳನ್ನು ದಾಖಲಿಸುವ ಮೂಲಕ ಮುಂದಿನ ಪೀಳಿಗೆಗೆ ಪರಿಚಯಿಸಬೇಕು. ಸಾಹಿತ್ಯದ ಬೆಳವಣಿಗೆ ಹಾಗೂ ಉಳಿವಿಗೆ ಪುಸ್ತಕ ರಚನೆ ಮಾಡುವವರನ್ನು ಪ್ರೋತ್ಸಾಹಿಸುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಅದೃಷ್ಟದ ಮೇಲೆ ಎಂದಿಗೂ ನಂಬಿಕೆ ಇಡಬಾರದು. ನಮ್ಮ ಪರಿಶ್ರಮದ ಮೇಲೆ ನಂಬಿಕೆ ಇಡಬೇಕು. ಇಂದು ನಾವು ಈ ಸ್ಥಾನಕ್ಕೆ ತಲುಪಲು ಅಪಾರ ಶ್ರಮ ವಹಿಸಿದ್ದೇವೆ. ಆರೋಗ್ಯ, ಕುಟುಂಬ ಹಾಗೂ ವೈಯಕ್ತಿಕ ಜೀವನವನ್ನೂ ಲೆಕ್ಕಿಸದೆ ಸಾಕಷ್ಟು ತ್ಯಾಗ ಮಾಡಿದ್ದೇವೆ ಎಂದು ತಮ್ಮ ಅನುಭವಗಳನ್ನು ಹಂಚಿಕೊಂಡರು.

ತಮ್ಮ ಅಧಿಕಾರಾವಧಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು, ಮುಂದಿನ ಪೀಳಿಗೆ ನೆನಪಿಸಿಕೊಳ್ಳುವಂತಹ ಸಾಕ್ಷಿಗುಡ್ಡೆಗಳನ್ನು ಬಿಟ್ಟುಹೋಗಬೇಕು ಎಂಬುದೇ ತಮ್ಮ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಗಳು, ಸಚಿವ ಪಿ.ಎಂ. ನರೇಂದ್ರಸ್ವಾಮಿ, ಕರ್ನಾಟಕ ವಿಧಾನ ಪರಿಷತ್ತಿನ ಉಪಸಭಾಪತಿ ಉಮಾಶ್ರೀ, ಶಾಸಕರಾದ ತನ್ವೀರ್ ಸೇಠ್, ಎ.ಆರ್. ಕೃಷ್ಣಮೂರ್ತಿ, ಜಿ.ಟಿ. ದೇವೇಗೌಡ, ಸಂಸದ ಸುನೀಲ್ ಬೋಸ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ. ರೇವಣ್ಣ, ಮೈಸೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಲೋಕನಾಥ್ ಎನ್.ಕೆ. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ನ.17ರಿಂದ ಬೆಂಗಳೂರು ಟೆಕ್ ಸಮಿಟ್ 2026 1,800ಕ್ಕೂ ಹೆಚ್ಚು ಪ್ರದರ್ಶಕರ ಭಾಗಿ



"ಮುಂಜಾನೆಯ ಮೆರಗು"

ಬೆಂಗಳೂರು ನ, 12– ಉದಯೋನ್ಮುಖ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (ಎಐ) ಹಾಗೂ ನಾವೀನ್ಯತೆಗಳಿಗೆ ಜಾಗತಿಕ ವೇದಿಕೆ ಕಲ್ಪಿಸುವ 29ನೇ ಆವೃತ್ತಿಯ 'ಬೆಂಗಳೂರು ಟೆಕ್ ಸಮಿಟ್ 2026' ಆಯೋಜನೆಗೆ ಸಿದ್ಧತೆಗಳು ಭರದಿಂದ ಸಾಗಿವೆ.

ಈ ಹಿನ್ನೆಲೆಯಲ್ಲಿ ಸಮಗ್ರ ಸಿದ್ಧತೆಗಳ ಪರಿಶೀಲನೆಗಾಗಿ ಐಟಿ ಮತ್ತು ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರು ಅಂತಾರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರಕ್ಕೆ (ಬಿಐಇಸಿ) ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

'ಎಐ ಅಂಡ್ ಬಿಯಾಂಡ್' ಎಂಬ ಧ್ಯೇಯವಾಕ್ಯದೊಂದಿಗೆ ನವೆಂಬರ್ 17ರಿಂದ 19ರವರೆಗೆ ನಡೆಯಲಿರುವ ಈ ಸಮಾವೇಶದಲ್ಲಿ 1,800ಕ್ಕೂ ಹೆಚ್ಚು ಪ್ರದರ್ಶಕರು ಭಾಗವಹಿಸಲಿದ್ದಾರೆ. ತಂತ್ರಜ್ಞಾನ ಕ್ಷೇತ್ರದ ಹೊಸ ಆವಿಷ್ಕಾರಗಳು, ಉದ್ಯಮಶೀಲತೆ ಹಾಗೂ ಹೂಡಿಕೆ ಅವಕಾಶಗಳ ಪ್ರದರ್ಶನಕ್ಕೆ ಈ ಸಮಾವೇಶ ವೇದಿಕೆಯಾಗಲಿದೆ.

ಈ ಬಾರಿಯ ಸಮಾವೇಶದ ವಿಶೇಷ ಆಕರ್ಷಣೆಯಾಗಿ ಮೊದಲ ಬಾರಿಗೆ 'ರೊಬೊಟಿಕ್ಸ್ ಪೆವಿಲಿಯನ್' ಸ್ಥಾಪಿಸಲಾಗುತ್ತಿದೆ. ಇದರೊಂದಿಗೆ 'ಎಲಿವೇಟ್' ಕಾರ್ಯಕ್ರಮದ 10 ವರ್ಷಗಳ ಸಂಭ್ರಮ, 'ಫ್ಯೂಚರ್ ಮೇಕರ್ಸ್ ಕಾನ್‌ಕ್ಲೇವ್', ಹೂಡಿಕೆದಾರರ ಸಮಾವೇಶಗಳು, ಸ್ಟಾರ್ಟಪ್ ಪಿಚ್‌ಗಳು ಹಾಗೂ ವಿವಿಧ ತಂತ್ರಜ್ಞಾನ ಅನುಭವಗಳಿಗೂ ಅವಕಾಶ ಕಲ್ಪಿಸಲಾಗಿದೆ.

ಈ ಬಾರಿಯ ಬೆಂಗಳೂರು ಟೆಕ್ ಸಮಿಟ್ ಈವರೆಗಿನ ಅತಿದೊಡ್ಡ ಆವೃತ್ತಿಯಾಗಲಿದ್ದು, ಜಾಗತಿಕ ತಂತ್ರಜ್ಞಾನ ಕ್ಷೇತ್ರದ ಪ್ರಮುಖರು, ಉದ್ಯಮಿಗಳು, ಹೂಡಿಕೆದಾರರು, ಸಂಶೋಧಕರು ಹಾಗೂ ನವೋದ್ಯಮಿಗಳು ಒಂದೇ ವೇದಿಕೆಯಲ್ಲಿ ಸೇರಲಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಹೊಸ ಆಲೋಚನೆಗಳು, ಉದ್ಯಮಾವಕಾಶಗಳು ಹಾಗೂ ಜಾಗತಿಕ ಪಾಲುದಾರಿಕೆಗಳನ್ನು ಅನ್ವೇಷಿಸಲು ಆಸಕ್ತರು ಸಮಾವೇಶದಲ್ಲಿ ಪಾಲ್ಗೊಳ್ಳುವಂತೆ ಸಚಿವರು ಆಹ್ವಾನಿಸಿದ್ದಾರೆ.

ಸಾರ್ವಜನಿಕ ಪರೀಕ್ಷೆಗಳ ಪಾರದರ್ಶಕತೆಗೆ ತಂತ್ರಜ್ಞಾನ ಬಳಕೆ: ಸಚಿವ ಪ್ರಿಯಾಂಕ್ ಖರ್ಗೆ



"ಮುಂಜಾನೆಯ ಮೆರಗು"

ಬೆಂಗಳೂರು ನ, 12– ಸಾರ್ವಜನಿಕ ಪರೀಕ್ಷೆಗಳ ವಿಶ್ವಾಸಾರ್ಹತೆ ಹಾಗೂ ಪಾರದರ್ಶಕತೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ತಂತ್ರಜ್ಞಾನ ಆಧಾರಿತ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಳ್ಳಲು ಮುಂದಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸಾರ್ವಜನಿಕ ಪರೀಕ್ಷೆಗಳ ವಿಶ್ವಾಸಾರ್ಹತೆಯನ್ನು ಹೆಚ್ಚಿಸುವ ಮಾರ್ಗೋಪಾಯಗಳ ಕುರಿತು ಚರ್ಚಿಸಲು ಇ–ಆಡಳಿತ ಇಲಾಖೆ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕಾರಿಗಳೊಂದಿಗೆ 'ಕೈಂಡ್ರಿಲ್' (ಏಥಿಟಿ–ಜಡಿಥಿಟ) ಸಂಸ್ಥೆಯ ತಂಡವನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಾಯಿತು ಎಂದು ಅವರು ತಿಳಿಸಿದ್ದಾರೆ.

ಸಭೆಯಲ್ಲಿ ಪ್ರಶ್ನೆಪತ್ರಿಕೆ ಸಿದ್ಧಪಡಿಸುವಿಕೆ, ಸುರಕ್ಷಿತ ವಿತರಣೆ, ಪರೀಕ್ಷಾ ನಿರ್ವಹಣೆ, ಉತ್ತರಪತ್ರಿಕೆಗಳ ಮೌಲ್ಯಮಾಪನ ಹಾಗೂ ಫಲಿತಾಂಶ ಪ್ರಕಟಿಸುವವರೆಗಿನ ಸಂಪೂರ್ಣ ಪರೀಕ್ಷಾ ಪ್ರಕ್ರಿಯೆಯನ್ನು ಸಮಗ್ರವಾಗಿ ಪರಿಶೀಲಿಸಲಾಯಿತು. ವಿಶೇಷವಾಗಿ ಪರೀಕ್ಷಾ ದಾಖಲೆಗಳು ಮತ್ತು ಮಾಹಿತಿಗಳು ಒಂದು ಹಂತದಿಂದ ಮತ್ತೊಂದು ಹಂತಕ್ಕೆ ವರ್ಗಾವಣೆಯಾಗುವ ಸಂದರ್ಭದಲ್ಲಿ ಎದುರಾಗಬಹುದಾದ ಲೋಪದೋಷಗಳು ಹಾಗೂ ಭದ್ರತಾ ಸವಾಲುಗಳ ಬಗ್ಗೆ ಚರ್ಚಿಸಲಾಯಿತು.

ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ಅವರಿಂದ ವಿವಿಧ ಕಾಮಗಾರಿಗಳಿಗೆ ಚಾಲನೆ



"ಮುಂಜಾನೆಯ ಮೆರಗು"

ಹರಪನಹಳ್ಳಿ ನ, 12– ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಿರುವ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ಅವರು ಕ್ಷೇತ್ರದ ವಿವಿಧ ಗ್ರಾಮಗಳು ಹಾಗೂ ಹರಪನಹಳ್ಳಿ ಪಟ್ಟಣದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿರುವ ರಸ್ತೆ ಮತ್ತು ಸೇತುವೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಿದ್ದಾರೆ.

ತಾಲ್ಲೂಕಿನ ಮತ್ತಿಹಳ್ಳಿ ಗ್ರಾಮದ ಸಮೀಪ ಹಗರಿಹಳ್ಳಕ್ಕೆ ನೂತನ ಸೇತುವೆ ನಿರ್ಮಾಣ ಕಾಮಗಾರಿಯನ್ನು 9 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಸೇತುವೆ ನಿರ್ಮಾಣದಿಂದ ಸುತ್ತಮುತ್ತಲಿನ ಗ್ರಾಮಗಳ ಜನರು, ರೈತರು ಹಾಗೂ ವಾಹನ ಸವಾರರಿಗೆ ಅನುಕೂಲವಾಗಲಿದೆ.

ಅದೇ ರೀತಿ ಹರಪನಹಳ್ಳಿ ಪಟ್ಟಣದ ಮೇಗಳ ಉಪ್ಪಾರಗೇರಿಯ ಆಂಜನೇಯ ದೇವಸ್ಥಾನದಿಂದ ಯಲ್ಲಾಪುರ ಗ್ರಾಮದವರೆಗೆ ಆಯ್ದ ಭಾಗಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು 2 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.

ಇದರೊಂದಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ 2025–26ನೇ ಸಾಲಿನ ಮೈಕ್ರೋ ಯೋಜನೆಯಡಿ ಅನುಮೋದನೆಗೊಂಡಿರುವ ಹರಪನಹಳ್ಳಿ ಪಟ್ಟಣದ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೂ ಚಾಲನೆ ನೀಡಲಾಗುತ್ತಿದೆ.

ಪಟ್ಟಣದ ಐ.ಬಿ. ವೃತ್ತದಿಂದ ಹಡಗಲಿ ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆ, ಬೈಪಾಸ್ ರಸ್ತೆಯ ಚಿರು ಹೋಂಡಾ ಶೋರೂಂ ಪಕ್ಕದ ರಸ್ತೆ, ಪಿ.ಎಲ್.ಡಿ. ಬ್ಯಾಂಕ್ ಹಿಂಭಾಗದ ರಸ್ತೆ, ಸಾಯಿ ಶೋರೂಂ ಪಕ್ಕದ ರಸ್ತೆ, ಗ್ಯಾಸ್ ಏಜೆನ್ಸಿ ರಸ್ತೆ, ತೆಲುಗರ ಓಣಿ ರಸ್ತೆ, ಟೀಚರ್ ಕಾಲೋನಿಯ ಇಂತಿಯಾಜ್ ಅವರ ಮನೆ ಮುಂಭಾಗದ ರಸ್ತೆ ಹಾಗೂ ತರಳಬಾಳು ಕಲ್ಯಾಣ ಮಂಟಪದ ಪಕ್ಕದ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

ಜತೆಗೆ ಹರಪನಹಳ್ಳಿ ತಾಲ್ಲೂಕಿನ ಕಂಚಿಕೇರಿ ಗ್ರಾಮದಲ್ಲಿಯೂ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ.

ಶಾಸಕಿಯವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಅಭಿವೃದ್ಧಿ ಕಾಮಗಾರಿಗಳಿಂದ ಕ್ಷೇತ್ರದ ರಸ್ತೆ ಸಂಪರ್ಕ ವ್ಯವಸ್ಥೆ ಸುಧಾರಿಸುವುದರ ಜತೆಗೆ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತಷ್ಟು ವೇಗ ದೊರೆಯಲಿದೆ.

ಗ್ರಾಮೀಣ ಕುಡಿಯುವ ನೀರು, ವಿದ್ಯುತ್ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸಿ: ಶಾಸಕ ಡಾ. ಶ್ರೀನಿವಾಸ್ ಸೂಚನೆ



"ಮುಂಜಾನೆಯ ಮೆರಗು"

ಕೂಡ್ಲಿಗಿ ನ, 12– ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಮತ್ತು ವಿದ್ಯುತ್ ಪೂರೈಕೆಗೆ ಸಂಬಂಧಿಸಿದ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರ ಕಲ್ಪಿಸುವಂತೆ ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೂಡ್ಲಿಗಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಜೆಸ್ಕಾಂ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಅಧಿಕಾರಿಗಳೊಂದಿಗೆ ವಿದ್ಯುತ್ ಮತ್ತು ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಕ್ಷೇತ್ರದಲ್ಲಿ ಬರಗಾಲದ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಕುರಿತು ಶಾಸಕರು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗದಂತೆ ನಿರಂತರ ನಿಗಾ ವಹಿಸುವಂತೆ ಸೂಚಿಸಿದರು.

ಇದೇ ವೇಳೆ, ಮುರಿದುಹೋಗಿರುವ ಹಾಗೂ ಹಾಳಾಗಿರುವ ವಿದ್ಯುತ್ ಕಂಬಗಳನ್ನು ತಕ್ಷಣ ಬದಲಾಯಿಸಬೇಕು. ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕಂಡುಬಂದಿರುವ ವಿದ್ಯುತ್ ಸಮಸ್ಯೆಗಳನ್ನು ಆದ್ಯತೆ–ಯ ಮೇರೆಗೆ ಪರಿಹರಿಸಬೇಕು ಎಂದು ತಿಳಿಸಿದರು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆಯೂ ನಿರ್ದೇಶನ ನೀಡಿದರು.

ಕುಡಿಯುವ ನೀರು ಮತ್ತು ವಿದ್ಯುತ್ ಜನರ ಮೂಲಭೂತ ಅಗತ್ಯಗಳಾಗಿದ್ದು, ಈ ಸೇವೆಗಳ ಪೂರೈಕೆಯಲ್ಲಿ ಯಾವುದೇ ಲೋಪವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ ಪರಿಹಾರ ಒದಗಿಸಬೇಕು ಎಂದು ಶಾಸಕರು ಒತ್ತಿ ಹೇಳಿದರು.

ಸಭೆಯಲ್ಲಿ ವಿದ್ಯುತ್ ಇಲಾಖೆಯ ಅಧಿಕಾರಿಗಳಾದ ವಿಕಾಂತ ರೆಡ್ಡಿ, ಸತೀಶ್, ನಾಗರಾಜ್, ವಿಷ್ಣು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿ ಪ್ರಸನ್ನ, ಜೆಸ್ಕಾಂನ ವಿವಿಧ ವಿಭಾಗಗಳ ಮುಖ್ಯಸ್ಥರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ನರಸಪ್ಪ ಉಪಸ್ಥಿತರಿದ್ದರು.

ಎಸ್ಸಿ, ಎಸ್ಟಿ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ ಮಹತ್ವದ ಸಭೆ ಶಿಕ್ಷಣ, ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕೆ ಒತ್ತು



"ಮುಂಜಾನೆಯ ಮೆರಗು"

ಬೆಂಗಳೂರು ನ, 12– ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿ ಹಾಗೂ ಸಬಲೀಕರಣಕ್ಕೆ ಅಗತ್ಯವಾದ ಕ್ರಮಗಳ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಮಹತ್ವದ ಸಭೆ ನಡೆಯಿತು.

ಸಭೆಯಲ್ಲಿ ಶಾಸಕ ಕೆ.ಎಸ್. ಬಸವಂತಪ್ಪ ಸೇರಿದಂತೆ ಸಚಿವರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ವಿವಿಧ ನಿಗಮ–ಮಂಡಳಿಗಳ ಅಧ್ಯಕ್ಷರು ಭಾಗವಹಿಸಿ ಸಮುದಾಯಗಳ ಅಭಿವೃದ್ಧಿಗೆ ಸಂಬಂಧಿಸಿದ ಹಲವು ವಿಚಾರಗಳ ಕುರಿತು ಚರ್ಚಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡುವುದು, ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು, ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ಹಾಗೂ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್

ಬೀಗದಡಿ ಅಂಗನವಾಡಿ; ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯ ದೂರ

“ಮುಂಜಾನೆಯ ಮೆರಗು”

ಜಗಳೂರು, ನ.12– ಮಕ್ಕಳ ಅಪೌಷ್ಟಿಕತೆ ನಿವಾರಣೆ, ಗರ್ಭಿಣಿ ಹಾಗೂ ಬಾಣಂತಿಯರ ಆರೋಗ್ಯ ರಕ್ಷಣೆ ಮತ್ತು ಗ್ರಾಮೀಣ ಮಕ್ಕಳಿಗೆ ಪೂರ್ವಪ್ರಾಥಮಿಕ ಶಿಕ್ಷಣ ಒದಗಿಸುವ ಮಹತ್ವದ ಉದ್ದೇಶದಿಂದ ಸರ್ಕಾರ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸಿದೆ. ಆದರೆ, ಈ ಯೋಜನೆಗಳ ಅನುಷ್ಠಾನದಲ್ಲಿ ಸಿಬ್ಬಂದಿಯ ನಿರ್ಲಕ್ಷ್ಯ ಹಾಗೂ ಇಲಾಖೆಯ ಮೇಲ್ವಿಚಾರಣೆಯ ವೈಫಲ್ಯಕ್ಕೆ ಜಗಳೂರು ತಾಲ್ಲೂಕಿನ ಗಡಿ ಗ್ರಾಮವಾದ ಮಾದಮುತ್ತೇನಹಳ್ಳಿಯ ಅಂಗನವಾಡಿ ಕೇಂದ್ರವೇ ಸಾಕ್ಷಿಯಾಗಿದೆ.

ಗ್ರಾಮದ ಮಕ್ಕಳ ಭವಿಷ್ಯ ರೂಪಿಸಬೇಕಾದ ಅಂಗನವಾಡಿ ಕೇಂದ್ರವೇ ವಾರಕ್ಕೊಮ್ಮೆ ಬಾಗಿಲು ತೆರೆಯುವ ಸ್ಥಿತಿಗೆ ತಲುಪಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ವಾರದ ಬಹುತೇಕ ದಿನಗಳಲ್ಲಿ ಕೇಂದ್ರಕ್ಕೆ ಬೀಗ ಹಾಕಲಾಗುತ್ತಿದ್ದು, ಮಕ್ಕಳಿಗೆ ದೊರೆಯಬೇಕಾದ ಪೌಷ್ಟಿಕ ಆಹಾರ, ಪೂರ್ವಪ್ರಾಥಮಿಕ ಶಿಕ್ಷಣ ಹಾಗೂ ಸರ್ಕಾರದ ವಿವಿಧ ಸೌಲಭ್ಯಗಳು ಕೇವಲ ದಾಖಲೆಗಳಿಗೆ ಸೀಮಿತವಾಗಿವೆಯೇ ಎಂಬ ಅನುಮಾನ ಸಾರ್ವಜನಿಕರಲ್ಲಿ ಮೂಡಿದೆ.

ಅಂಗನವಾಡಿಯೋ, ಬೀಗ ಹಾಕಿದ ಕಟ್ಟಡವೋ?

ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದಾಗ ಬಾಗಿಲಿಗೆ ಬೀಗ ಹಾಕಿರುವುದು ಕಂಡುಬಂದಿದೆ. ಕೇಂದ್ರದ ಸುತ್ತಮುತ್ತ ಗಿಡಗಂಟಿಗಳು ಬೆಳೆದುಕೊಂಡಿದ್ದು, ಮಕ್ಕಳ ಕಲರವ ಕೇಳಬೇಕಾದ ಆವರಣದಲ್ಲಿ ನಿರ್ಜನ ವಾತಾವರಣ ಆವರಿಸಿದೆ. ಆಟ, ಪಾಠ ಹಾಗೂ ಪೌಷ್ಟಿಕ ಆಹಾರ ಚಟುವಟಿಕೆಗಳು ನಡೆಯಬೇಕಾದ ಕೇಂದ್ರವೇ ನಿರ್ವಹಣೆಯಿಲ್ಲದೆ ಪಾಳುಬಿದ್ದ ಕಟ್ಟಡದಂತೆ ಕಾಣುತ್ತಿದೆ.

ಅಂಗನವಾಡಿ ಕೇಂದ್ರವನ್ನು ಪ್ರತಿದಿನ ತೆರೆಯುವ ಜವಾಬ್ದಾರಿ ಯಾರದ್ದು? ಮಕ್ಕಳ ಹಾಜರಾತಿ, ಆಹಾರ ವಿತರಣೆ ಹಾಗೂ ಕಲಿಕಾ ಚಟುವಟಿಕೆಗಳ ಮೇಲ್ವಿಚಾರಣೆ ಮಾಡುವ ಅಧಿಕಾರಿಗಳು ಎಲ್ಲಿದ್ದಾರೆ? ವಾರದ ಬಹುತೇಕ ದಿನ ಕೇಂದ್ರಕ್ಕೆ ಬೀಗ ಬಿದ್ದಿದ್ದರೂ ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ಬಂದಿಲ್ಲವೇ? ಅಥವಾ ಎಲ್ಲವೂ ತಿಳಿದಿದ್ದರೂ ಅಧಿಕಾರಿಗಳು ಮೌನ ವಹಿಸಿದ್ದಾರೆಯೇ? ಎಂಬ ಪ್ರಶ್ನೆಗಳು ಗ್ರಾಮಸ್ಥರನ್ನು ಕಾಡುತ್ತಿವೆ.

ಮಕ್ಕಳಿಗೆ ಮೊಟ್ಟೆಯೂ ಇಲ್ಲ, ಪೌಷ್ಟಿಕ ಆಹಾರವೂ ಇಲ್ಲ!

ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ವಿತರಿಸಬೇಕಾದ ಪೌಷ್ಟಿಕ ಆಹಾರ ಸಮರ್ಪಕವಾಗಿ ದೊರೆಯುತ್ತಿಲ್ಲ ಎಂಬುದು ಗ್ರಾಮಸ್ಥರ ಪ್ರಮುಖ ಆರೋಪವಾಗಿದೆ. ಮಕ್ಕಳಿಗೆ ಮೊಟ್ಟೆ ವಿತರಿಸಬೇಕಾದರೂ ಈವರೆಗೂ ಒಂದು ಮೊಟ್ಟೆಯನ್ನೂ ನೀಡಿಲ್ಲ ಎಂದು ಸ್ಥಳೀಯರು ದೂರಿದ್ದಾರೆ. ಮಕ್ಕಳ ಅಪೌಷ್ಟಿಕತೆ ನಿವಾರಿಸುವ ಉದ್ದೇಶದ ಯೋಜನೆಯಲ್ಲೇ ಇಂತಹ ಲೋಪಗಳು ಕಂಡುಬಂದಿರುವುದು ಆತಂಕಕ್ಕೆ ಕಾರಣವಾಗಿದೆ.



ಅಂಗನವಾಡಿ ಎಂದರೆ ಕೇವಲ ಆಹಾರ ವಿತರಿಸುವ ಕೇಂದ್ರವಲ್ಲ. ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಬೆಳೆಸುವುದು, ಅಕ್ಷರಗಳ ಪ್ರಾಥಮಿಕ ಪರಿಚಯ ಮಾಡಿಸುವುದು, ಆಟದ ಮೂಲಕ ಜ್ಞಾನ ನೀಡುವುದು ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಆದರೆ, ಕೇಂದ್ರವೇ ಸಮರ್ಪಕವಾಗಿ ಕಾರ್ಯನಿರ್ವಹಿಸದಿದ್ದರೆ ಮಕ್ಕಳಿಗೆ ಶಿಕ್ಷಣ ಮತ್ತು ಪೌಷ್ಟಿಕ ಆಹಾರ ದೊರೆಯುವುದಾದರೂ ಹೇಗೆ ಎಂಬ ಪ್ರಶ್ನೆ ಪೋಷಕರನ್ನು ಕಾಡುತ್ತಿದೆ.

ಗರ್ಭಿಣಿ, ಬಾಣಂತಿಯರಿಗೂ ಸೌಲಭ್ಯ ಮರೀಚಿಕೆ!

ಮಕ್ಕಳ ವಿಚಾರ ಒಂದೆಡೆಯಾದರೆ, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಸರ್ಕಾರದ ವತಿಯಿಂದ ದೊರೆಯಬೇಕಾದ ಪೌಷ್ಟಿಕ ಆಹಾರ ಹಾಗೂ ಇತರ ಸೌಲಭ್ಯಗಳ ವಿತರಣೆಯಲ್ಲಿಯೂ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಗರ್ಭಿಣಿಯರು ಮತ್ತು ಬಾಣಂತಿಯರ ಆರೋಗ್ಯದ ದೃಷ್ಟಿಯಿಂದ ಸರ್ಕಾರ ಹಲವು ಪೌಷ್ಟಿಕ ಆಹಾರ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ, ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳು ಸಮರ್ಪಕವಾಗಿ ತಲುಪದಿದ್ದರೆ ಇಂತಹ ಯೋಜನೆಗಳ ಉದ್ದೇಶವೇನು ಎಂಬ ಪ್ರಶ್ನೆ ಉದ್ಭವಿಸಿದೆ.

ಎಚ್ಚರಿಕೆ ನೀಡಿದರೂ ಬದಲಾಗದ ಪರಿಸ್ಥಿತಿ!

ಅಂಗನವಾಡಿ ಕೇಂದ್ರದ ನಿರ್ವಹಣೆಯಲ್ಲಿನ ಲೋಪದ ಕುರಿತು ಗ್ರಾಮಸ್ಥರು ಈ ಹಿಂದೆಯೇ ಇಲಾಖೆಯ ಗಮನಕ್ಕೆ ತಂದಿದ್ದರು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಕರ್ತೆ ಹಾಗೂ ಸಹಾಯಕಿಯನ್ನು ಕರೆಸಿ ಎಚ್ಚರಿಕೆ ನೀಡಲಾಗಿತ್ತು. ಆದರೂ ಪರಿಸ್ಥಿತಿಯಲ್ಲಿ ಬದಲಾವಣೆಯಾಗದೆ ಮತ್ತೆ ಅದೇ ಸಮಸ್ಯೆ ಮರುಕಳಿಸಿರುವುದು ಇಲಾಖೆಯ ಮೇಲ್ವಿಚಾರಣಾ ವ್ಯವಸ್ಥೆಯ ಕಾರ್ಯವೈಖರಿಯ ಬಗ್ಗೆ ಅನುಮಾನ ಮೂಡಿಸಿದೆ.

ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ತಕ್ಷಣ ಮಾದಮುತ್ತೇನಹಳ್ಳಿಗೆ ಭೇಟಿ ನೀಡಿ ಕೇಂದ್ರದ ಕಾರ್ಯನಿರ್ವಹಣೆ, ಮಕ್ಕಳ ಹಾಜರಾತಿ, ಪೌಷ್ಟಿಕ ಆಹಾರ ಹಾಗೂ ಮೊಟ್ಟೆ ವಿತರಣೆ ಮತ್ತು ಗರ್ಭಿಣಿ–ಬಾಣಂತಿಯರಿಗೆ ದೊರೆಯಬೇಕಾದ ಸೌಲಭ್ಯಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ಕರ್ತವ್ಯಲೋಪ ಎಸಗಿರುವುದು ಸಾಬೀತಾದಲ್ಲಿ ಸಂಬಂಧಪಟ್ಟವರ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಂಡು, ಅಂಗನವಾಡಿ ಕೇಂದ್ರ ಪ್ರತಿದಿನ ನಿಯಮಾನುಸಾರ ಕಾರ್ಯನಿರ್ವಹಿಸುವಂತೆ ಕ್ರಮ ವಹಿಸಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಒಟ್ಟಾರೆ, ಮಕ್ಕಳಿಗೆ ಸಿಗಬೇಕಾದ ಆಹಾರ ಮತ್ತು ಶಿಕ್ಷಣದಲ್ಲಿ ನಿರ್ಲಕ್ಷ್ಯ ತೋರುವುದು ಸಾಮಾನ್ಯ ಆಡಳಿತಾತ್ಮಕ ಲೋಪವಲ್ಲ. ಅಂಗನವಾಡಿ ಕೇಂದ್ರಗಳು ಅಧಿಕಾರಿಗಳ ಕಡತಗಳಲ್ಲಿ ಮಾತ್ರ ಸಕ್ರಿಯವಾಗಿರದೆ, ಗ್ರಾಮೀಣ ಪ್ರದೇಶಗಳಲ್ಲಿ ನೈಜವಾಗಿ ಕಾರ್ಯನಿರ್ವಹಿಸಬೇಕು. ಇಲ್ಲವಾದರೆ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪದೆ ಕಾಗದದ ಮೇಲಿನ ಭರವಸೆಗಳಾಗಿಯೇ ಉಳಿಯಲಿವೆ.

ಮರುಕಳಿಸಿದರೆ ಶಿಸ್ತು ಕ್ರಮಕ್ಕೆ ಪತ್ರ: ಸಿಡಿಪಿಒ

"ಅಂಗನವಾಡಿ ಕೇಂದ್ರವನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ ಎಂಬ ಬಗ್ಗೆ ಈ ಹಿಂದೆ ಗ್ರಾಮಸ್ಥರು ಮಾಹಿತಿ ನೀಡಿದ್ದರು. ಆಗ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯನ್ನು ಕರೆಸಿ ಎಚ್ಚರಿಕೆ ನೀಡಿ ಕಳುಹಿಸಲಾಗಿತ್ತು. ಇದೀಗ ಅದೇ ವಿಚಾರ ಮತ್ತೆ ಮರುಕಳಿಸಿರುವ ಹಿನ್ನೆಲೆಯಲ್ಲಿ ಮೇಲ್ವಿಚಾರಕರಿಂದ ಮಾಹಿತಿ ಪಡೆದು, ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಜಿಲ್ಲಾ ಅಧಿಕಾರಿಗಳಿಗೆ ಪತ್ರ ಬರೆಯಲಾಗುವುದು."

––– ಶಿವಕುಮಾರ್

ಶಿಶು ಅಭಿವೃದ್ಧಿ ಯೋಜನಾಧಿಕಾರಿ (ಸಿಡಿಪಿಒ), ಜಗಳೂರು.

ಸರ್ಕಾರಿ ಸೇವೆಯಿಂದ ನಿವೃತ್ತಿ ಸಹಜ; ಜನಮಾನಸದಲ್ಲಿ ಉಳಿಯುವ ಸೇವೆಯೇ ಶಾಶ್ವತ: ಎಸ್.ವಿ. ರಾಮಚಂದ್ರ

“ಮುಂಜಾನೆಯ ಮೆರಗು”

ಜಗಳೂರು ನ, 12– ಸರ್ಕಾರಿ ಸೇವೆಯಲ್ಲಿ ಕಾರ್ಯನಿರ್ವಹಿಸುವವರಿಗೆ ವಯೋನಿವೃತ್ತಿ ಸಹಜ ಪ್ರಕ್ರಿಯೆ. ಆದರೆ ಸೇವಾವಧಿಯಲ್ಲಿ ಸಲ್ಲಿಸುವ ಪ್ರಾಮಾಣಿಕ, ನಿಷ್ಠಾವಂತ ಹಾಗೂ ಜನಪರ ಸೇವೆಗಳು ಜನಮಾನಸದಲ್ಲಿ ಶಾಶ್ವತವಾಗಿ ಉಳಿಯಬೇಕು ಎಂದು ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಹೇಳಿದರು.

ಜಗಳೂರು ವಿಧಾನ ಸಭಾ ಕ್ಷೇತ್ರದ ಚಟ್ನಿಹಳ್ಳಿ ಗ್ರಾಮದ ನಿವಾಸಿ, ಅಂಚೆ ಇಲಾಖೆಯಲ್ಲಿ ಪೋಸ್ಟ್‌ಮಾಸ್ಟರ್ ಆಗಿ ಸುದೀರ್ಘ ಕಾಲ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಈಶಣ್ಣ ಅವರ ನಿವಾಸಕ್ಕೆ ಗುರುವಾರ ಭೇಟಿ ನೀಡಿದ ಅವರು, ಈಶಣ್ಣ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಸೇವೆಯಲ್ಲಿ ಹಲವು ವರ್ಷಗಳ ಕಾಲ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದಿರುವ ಈಶಣ್ಣ ಅವರ ಸೇವೆ ಶ್ಲಾಘನೀಯವಾಗಿದೆ. ನಿವೃತ್ತಿಯ ನಂತರದ ಜೀವನ ಸುಖಮಯವಾಗಿರಲಿ, ಉತ್ತಮ ಆರೋಗ್ಯ ಹಾಗೂ ನೆಮ್ಮದಿ ದೊರೆಯಲಿ ಎಂದು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಸಂಘಟನೆ ಮತ್ತು ಬಲವರ್ಧನೆ ಸೇರಿದಂತೆ ಮುಂಬರುವ ರಾಜಕೀಯ ಬೆಳವಣಿಗೆಗಳ ಕುರಿತು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸೌಹಾರ್ದಯುತವಾಗಿ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಎಚ್. ವಿಶ್ವನಾಥ್, ಜಂಬನಗೌಡ, ನಿ.ಶಿ. ರಾಮಚಂದ್ರಪ್ಪ, ಗ್ರಾಮ ಪಂಚಾಯಿತಿ ಸದಸ್ಯ ನಾಗಪ್ಪ ಕಂಚಿಕೇರಿ, ಎಂ.ಎಚ್. ಮಂಜುನಾಥ್, ಪರಶುರಾಮ್ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ತಮ್ಮ ಛಾಪು ಮೂಡಿಸುತ್ತಿದ್ದಾರೆ: ಕೆಂಚಪ್ಪ

“ಮುಂಜಾನೆಯ ಮೆರಗು”

ಜಗಳೂರು ನ, 12– ಇಂದಿನ ಮಹಿಳೆಯರು ಶಿಕ್ಷಣ, ಉದ್ಯೋಗ, ರಾಜಕೀಯ, ಕ್ರೀಡೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ತಮ್ಮದೇ ಆದ ಛಾಪು ಮೂಡಿಸುವ ಮೂಲಕ ಸಾಧನೆಯ ಹಾದಿಯಲ್ಲಿ ಮುನ್ನಡೆಯುತ್ತಿದ್ದಾರೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಹೇಳಿದರು.



ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಬುಧವಾರ ವೀರವನಿತೆ ಒನಕೆ ಓಬವ್ವ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಒನಕೆ ಓಬವ್ವ ಅವರ ಧೈರ್ಯ, ಸಾಹಸ ಹಾಗೂ ಶೌರ್ಯದ ಹೋರಾಟ ಅವಿಸ್ಮರಣೀಯವಾಗಿದೆ. ನಾಡಿನ ಇತಿಹಾಸದಲ್ಲಿ ಅವರ ಹೆಸರು ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹದ್ದಾಗಿದೆ ಎಂದರು.

ಒನಕೆ ಓಬವ್ವ ಅವರ ಜೀವನಗಾಥೆ ಮಹಿಳೆಯರಿಗೆ ಮಾತ್ರವಲ್ಲದೆ ಪ್ರತಿಯೊಬ್ಬರಿಗೂ ಧೈರ್ಯ, ಆತ್ಮವಿಶ್ವಾಸ ಮತ್ತು ಸ್ವಾಭಿಮಾನದ ಬದುಕಿಗೆ ಪ್ರೇರಣೆಯಾಗಿದೆ. ಮಹಿಳೆಯರು ಇಂದು ಯಾವುದೇ ಕ್ಷೇತ್ರದಲ್ಲೂ ಪುರುಷರಿಗೆ ಕಡಿಮೆಯಿಲ್ಲದಂತೆ ಸಾಧನೆ ಮಾಡುತ್ತಿದ್ದು, ಸಮಾಜದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಸೊಕ್ಕೆ ಗ್ರಾಮದಲ್ಲಿ ಮೇಯುತ್ತಿದ್ದ ದೀಡೀರ್ ಎರಡು ಹಸುಗಳ ಸಾವು ಜೀವನಾಧಾರವಾಗಿದ್ದ ಹಸುಗಳನ್ನು ಕಳೆದುಕೊಂಡು ಶಾಂತಮ್ಮ ಕಣ್ಣೀರು

“ಮುಂಜಾನೆಯ ಮೆರಗು”

ಜಗಳೂರು, ನ.12– ತಾಲೂಕಿನ ಸೊಕ್ಕೆ ಗ್ರಾಮದ ಅಂಬೇಡ್ಕರ್ ವಸತಿ ಶಾಲೆಯ ಸಮೀಪ ಬುಧವಾರ ಜಮೀನಿನಲ್ಲಿ ಮೇಯುತ್ತಿದ್ದ ಎರಡು ಹಸುಗಳು ನಿಗೂಢ ಮೃತಪಟ್ಟಿರುವ ಘಟನೆ ನಡೆದಿದೆ.

ಸೊಕ್ಕೆ ಗ್ರಾಮದ ಶಾಂತಮ್ಮ ಎಂಬುವರಿಗೆ ಸೇರಿದ ಎರಡು ಹಸುಗಳು ವಿದ್ಯುತ್ ಪ್ರವಹಿಸಿದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿವೆ. ಮೃತಪಟ್ಟ ಹಸುಗಳ ಮೌಲ್ಯ ಸುಮಾರು ಒಂದು ಲಕ್ಷ ರೂಪಾಯಿಗೂ ಅಧಿಕ ಎಂದು ಅಂದಾಜಿಸಲಾಗಿದೆ.

ಹಸುಗಳನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿದ್ದ ಶಾಂತಮ್ಮ ಅವರಿಗೆ ಈ ಘಟನೆ ಆರ್ಥಿಕವಾಗಿ ದೊಡ್ಡ ಆಘಾತ ನೀಡಿದೆ. ಜೀವನಾಧಾರವಾಗಿದ್ದ ಎರಡು ಹಸುಗಳನ್ನು ಏಕಕಾಲದಲ್ಲಿ ಕಳೆದುಕೊಂಡಿರುವುದರಿಂದ ಶಾಂತಮ್ಮ ಅವರ ಕುಟುಂಬ ಕಣ್ಣೀರಿನಲ್ಲಿ ಮುಳುಗಿದೆ.

ಘಟನೆ ತಿಳಿಯುತ್ತಿದ್ದಂತೆ ಪಶುಪಾಲನಾ ಇಲಾಖೆ ಹಾಗೂ ಬೆಸ್ಕಾಂ ಇಲಾಖೆಯ ಅಧಿಕಾರಿಗಳ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ನಿಖರ ಕಾರಣವೇನು ಎಂಬುದರ ಕುರಿತು ಅಧಿಕಾರಿಗಳು ಪರಿಶೀಲನೆ ಕೈಗೊಂಡಿದ್ದಾರೆ.





ಶ್ರಮಕ್ಕೆ ಒಲಿದು ಬಂದ ಬಯಲು ಸೀಮೆ ನಿಗಮದ ನಿರ್ದೇಶಕ ಸ್ಥಾನ ಕ್ಷೇತ್ರದ ಜನರೊಂದಿಗೆ ಬೆರೆತು ಕೆಲಸ ಮಾಡುತ್ತಿರುವ ಎಂ.ಡಿ. ಕೀರ್ತಿಕುಮಾರ್

“ಮುಂಜಾನೆಯ ಮೆರಗು”

ಜಗಳೂರು ನ, 12– ರಾಜಕೀಯದಲ್ಲಿ ಅಧಿಕಾರ ಮತ್ತು ಸ್ಥಾನಮಾನಗಳಿಗಿಂತ ಜನರೊಂದಿಗೆ ಬೆರೆತು ಅವರ ಕಷ್ಟ–ಸುಖಗಳಿಗೆ ಸ್ಪಂದಿಸುವ ಮನೋಭಾವವೇ ನಿಜವಾದ ನಾಯಕತ್ವಕ್ಕೆ ಸಾಕ್ಷಿ. ಈ ನಿಟ್ಟಿನಲ್ಲಿ ಸರ್ಕಾರಿ ನೌಕರಿಯನ್ನೇ ತೊರೆದು ಜನಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡಿರುವ ಶಾಸಕ ಬಿ. ದೇವೇಂದ್ರಪ್ಪ ಅವರ ಪುತ್ರ ಹಾಗೂ ಕೆಪಿಸಿಸಿ ಎಸ್‌ಟಿ ವಿಭಾಗದ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರಿಗೆ ಇದೀಗ ಬಯಲು ಸೀಮೆ ಅಭಿವೃದ್ಧಿ ನಿಗಮದ ನಿರ್ದೇಶಕ ಸ್ಥಾನ ಒಲಿದು ಬಂದಿದೆ.

ಸರ್ಕಾರಿ ಸೇವೆಯಲ್ಲಿದ್ದ ಕೀರ್ತಿಕುಮಾರ್ ಅವರು ಜನಸೇವೆ ಮಾಡುವ ಉದ್ದೇಶದಿಂದ ತಮ್ಮ ಹುದ್ದೆಗೆ ರಾಜೀನಾಮೆ ನೀಡಿ, ಸಾರ್ವಜನಿಕ ಜೀವನಕ್ಕೆ ಕಾಲಿಟ್ಟರು. ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಪಕ್ಷ ಸಂಘಟನೆ ಹಾಗೂ ಜನಪರ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡ ಅವರ ಪರಿಶ್ರಮವನ್ನು ಗುರುತಿಸಿದ ಪಕ್ಷದ ನಾಯಕರು ಕೆಪಿಸಿಸಿ ಎಸ್‌ಟಿ ವಿಭಾಗದ ಪ್ರಧಾನ ಕಾರ್ಯದರ್ಶಿಯ ಜವಾಬ್ದಾರಿ ನೀಡಿದ್ದರು.

ಅಂದಿನಿಂದ ಕ್ಷೇತ್ರದ ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ತಮ್ಮದೇ ಆದ ರೀತಿಯಲ್ಲಿ ಗುರುತಿಸಿಕೊಳ್ಳುತ್ತಿರುವ ಕೀರ್ತಿಕುಮಾರ್, ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಭೇಟಿ ನೀಡುತ್ತಿದ್ದಾರೆ. ಗ್ರಾಮಗಳಲ್ಲಿ ನಡೆಯುವ ಶುಭ ಸಮಾರಂಭಗಳು, ಧಾರ್ಮಿಕ ಕಾರ್ಯಕ್ರಮಗಳು, ಸಾರ್ವಜನಿಕ ಸಭೆಗಳು ಸೇರಿದಂತೆ ಜನರ ಸುಖ–ದುಃಖಗಳಲ್ಲಿ ಭಾಗಿಯಾಗುತ್ತಿದ್ದಾರೆ. ಕುಟುಂಬಗಳಲ್ಲಿ ದುಃಖದ ಘಟನೆಗಳು ಸಂಭವಿಸಿದಾಗ ಸ್ಥಳಕ್ಕೆ ತೆರಳಿ ಸಾಂತ್ವನ ಹೇಳುವುದರೊಂದಿಗೆ ಸಂಕಷ್ಟದಲ್ಲಿರುವವರಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡುತ್ತಿದ್ದಾರೆ.



ಇದರ ಜೊತೆಗೆ ತಮ್ಮ ಬಳಿ ಸಮಸ್ಯೆಗಳನ್ನು ಹೊತ್ತು ತರುವ ಸಾರ್ವಜನಿಕರ ಅಹವಾಲುಗಳನ್ನು ತಾಳ್ಮೆಯಿಂದ ಆಲಿಸಿ, ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ದೊರಕಿಸಿಕೊಡಲು ಪ್ರಯತ್ನಿಸುತ್ತಿದ್ದಾರೆ. ಗ್ರಾಮೀಣ ಭಾಗದ ಜನರ ಸಮಸ್ಯೆಗಳು, ಮೂಲಸೌಕರ್ಯಗಳ ಕೊರತೆ, ಕುಡಿಯುವ ನೀರು, ರಸ್ತೆ, ವಿದ್ಯುತ್ ಸೇರಿದಂತೆ ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಗಮನಹರಿಸುತ್ತಾ ಜನರೊಂದ